ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

10 ಫೆಬ್ರವರಿ 2026 ಮಂಗಳವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 326 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629



ಬ್ರಿಯಾನ್ ಬೆನೆಟ್ ಅವರ ಬ್ಯಾಟಿಂಗ್ ಬಲದಿಂದ ಜಿಂಬಾಬ್ವೆ ತಂಡವು ಒಮಾನ್ ವಿರುದ್ಧ ಕೊಲಂಬೊದಲ್ಲಿ ಸೋಮವಾರ ನಡೆದ ಟಿ-20 ವಿಶ್ವಕಪ್ ಪಂದ್ಯದಲ್ಲಿ 8 ವಿಕೆಟ್‌ಗಳ ಸುಲಭ ಜಯ ಸಾಧಿಸಿತು.


ಮೌನಕಾಮತ್ರಿಯಲ್ಲಿ ತೊಡಗಿಸಿಕೊಂಡ ಡಬ್ಬಾವಾಲಾಗಳು » 2


20 ಕೋ.ರೂ.ವೆಚ್ಚದ ವಿದ್ಯುತ್ ವಿತರಣಾ ಉಪಕೇಂದ್ರ » 3


ವಕೀಲ ದೇವರಾಜೇಗೌಡ ವಿರುದ್ಧ ಹೈಕಮಾಂಡ್‌ಗೆ ದೂರು » 4

# ಸತತ ಲೋಕಸಭಾ ಕಲಾಪಕ್ಕೆ ಭಂಗ

## ಸಂಸತ್‌ನಲ್ಲಿ ಗದ್ದಲ-ಕೋಲಾಹಲ | ರಾಜ್ಯಸಭೆಯಲ್ಲೂ ಸಭಾತ್ಯಾಗ

• ಪ್ರಜೋದಯ ವರದಿ

**ನವದೆಹಲಿ:** ಕೇಂದ್ರ ಬಜೆಟ್ ಚರ್ಚೆಗೆ ಮುನ್ನ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಮಾತನಾಡಲು ಅವಕಾಶ ನೀಡಬೇಕೆಂಬ ವಿಷಯದ ಬಗ್ಗೆ ಆಡಳಿತಾರೂಢ ಎನ್‌ಡಿಎ ಹಾಗು ವಿಪಕ್ಷ ಇಂಡಿಯಾ ಮೈತ್ರಿಕೂಟ ಸೋಮವಾರವೂ ಒಮ್ಮತಕ್ಕೆ ಬರಲಿಲ್ಲ. ಇದರಿಂದಾಗಿ, ಸತತ ಆರನೇ ದಿನವೂ ಲೋಕಸಭಾ ಕಲಾಪಕ್ಕೆ ಭಂಗವಾಯಿತು.

ಜನರಲ್ ಎಂ.ಎನ್. ನರವಣೆ ಪುಸ್ತಕ ಸೇರಿ ವಿವಾದಾತ್ಮಕ ವಿಷಯಗಳನ್ನು ಪ್ರಸ್ತಾಪಿಸಲು ತಮಗೆ ಅವಕಾಶ ನೀಡುವ ಕುರಿತು ಒಪ್ಪಂದ ಆಗಿದೆ ಎಂದು ರಾಹುಲ್ ಗಾಂಧಿ ಪ್ರತಿಪಾದಿಸಿದರು. ವಿಪಕ್ಷ ನಾಯಕನ ಹೇಳಿಕೆಯನ್ನು ಬಿಜೆಪಿ ತಳ್ಳಿ ಹಾಕಿದ್ದು, ಅಂತಹ ಯಾವುದೇ ಒಪ್ಪಂದ ಆಗಿಲ್ಲವೆಂದು ಸ್ಪಷ್ಟಪಡಿಸಿದೆ. ಇನ್ನೊಂದೆಡೆ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರದ್ದು ಪಕ್ಷಪಾತದ ಧೋರಣೆ ಎಂದು ಆರೋಪಿಸಿರುವ ಕಾಂಗ್ರೆಸ್,



ಅವರನ್ನು ಪದಚ್ಯುತಗೊಳಿಸುವಂತೆ ಸಹಿ ಸಂಗ್ರಹಿಸಲು ಆರಂಭಿಸಿತು.

ಜನರಲ್ ನರವಣೆ ಅವರ ಪುಸ್ತಕದ ಕುರಿತು ರಾಹುಲ್‌ಗೆ ಮಾತನಾಡಲು ಅವಕಾಶ ನೀಡದ ಕಾರಣ ಕೆಳಮನೆಯಲ್ಲಿ ಗದ್ದಲ ಉಂಟಾಯಿತು. ಆದರೆ, ಕೇಂದ್ರ ಬಜೆಟ್ ಕುರಿತ ಚರ್ಚೆಗೆ ಅವಕಾಶ ಕಲ್ಪಿಸುವ ಸಂಬಂಧ ಲೋಕಸಭಾಧ್ಯಕ್ಷರು ವಿರೋಧ ಪಕ್ಷದ ನಾಯಕ ಮತ್ತು ಇತರ ನಾಯಕರೊಂದಿಗೆ ಒಂದೆರಡು ಸಭೆಗಳನ್ನು ನಡೆಸಿದರು. ಬಜೆಟ್ ಚರ್ಚೆಗೆ ಮುನ್ನ ಕೆಲವೊಂದು ವಿಷಯಗಳನ್ನು ಪ್ರಸ್ತಾಪಿಸಲು ಲೋಕಸಭಾಧ್ಯಕ್ಷರ ಜೊತೆಗಿನ ಸಭೆಯಲ್ಲಿ ಒಪ್ಪಂದ ಆಗಿದೆ. ಆದರೆ, ಸಭಾಧ್ಯಕ್ಷರು ಈಗ ಒಪ್ಪಂದ ಉಲ್ಲಂಘಿಸಿದ್ದಾರೆಂದು ರಾಹುಲ್ ಅವರು ಸದನದಲ್ಲಿ ಆಕ್ರೋಶ ವ್ಯಕ್ತಪಡಿಸಿದರು.

ಅಂತಹ ಯಾವುದೇ ಒಪ್ಪಂದದ ಬಗ್ಗೆ ನನಗೆ ತಿಳಿದಿಲ್ಲ. ಈ ಬಗ್ಗೆ ಕಾರ್ಯಸೂಚಿಯಲ್ಲೂ ಉಲ್ಲೇಖ

> **ವಿರೋಧ ಪಕ್ಷಗಳು ಎತ್ತಿದ ವಿಷಯಗಳಿಗೆ, ನರವಣೆ ಅವರ ಪುಸ್ತಕದಲ್ಲಿನ ವಿಷಯಗಳಿಗೆ ಭಯ ಪಟ್ಟು ಮೋದಿ ಲೋಕಸಭೆಗೆ ಬಂದಿಲ್ಲ. ಯಾರಾದರೂ ಪ್ರಧಾನಿ ಮೇಲೆ ದಾಳಿ ಮಾಡುವುದಾಗಿ ಹೇಳಿದ್ದರೆ, ಎಫ್‌ಐಆರ್ ಮಾಡಿ, ಆ ವ್ಯಕ್ತಿಯನ್ನು ಬಂಧಿಸಿ. ಕಾಂಗ್ರೆಸ್ ಸದಸ್ಯರು ಪ್ರಧಾನಿ ಮೇಲೆ ದಾಳಿ ಮಾಡುವ ಪ್ರಶ್ನೆಯೇ ಇಲ್ಲ. ಮೋದಿ ಸದನವನ್ನು ಎದುರಿಸಲು ಧೈರ್ಯ ಮಾಡಬೇಕಿತ್ತು.**
>
> **-ರಾಹುಲ್ ಗಾಂಧಿ, ಲೋಕಸಭಾ ವಿಪಕ್ಷ ನಾಯಕ**

ಇಲ್ಲ. ನೋಟಿಸ್ ಇಲ್ಲದೆ ಯಾವುದೇ ವಿಷಯ ಪ್ರಸ್ತಾಪಿಸಲು ಯಾರಿಗೂ ಅವಕಾಶ ನೀಡುವುದಿಲವೆಂದು ಸಭಾಧ್ಯಕ್ಷರ ಪೀಠದಲ್ಲಿದ್ದ ಬಿಜೆಪಿ ಸದಸ್ಯೆ ಸಂಧ್ಯಾ ರೇ ಸ್ಪಷ್ಟಪಡಿಸಿದರು.

ಈ ಹಂತದಲ್ಲಿ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಧ್ಯಪ್ರವೇಶಿಸಿ, ಅಂತಹ ಯಾವುದೇ ಒಪ್ಪಂದ ಆಗಿಲ್ಲ. ಸ್ಪೀಕರ್ ಬಗ್ಗೆ ರಾಹುಲ್ ಏನಾದರೂ ಹೇಳಲು ಬಯಸಿದರೆ, ಆಗ ಬಿರ್ಲಾ ಕೂಡ ಸದನದಲ್ಲಿ ಹಾಜರಿರಬೇಕು. ಸ್ಪೀಕರ್ ವಿರುದ್ಧ ಆರೋಪಗಳನ್ನು ಮಾಡಿದರೆ, ಸದನದ ಇತರ ನಾಯಕರಿಗೂ ಮಾತನಾಡಲು ಅವಕಾಶ ನೀಡಲಾಗುವುದು ಮತ್ತು ಸರ್ಕಾರವು ಪ್ರತಿಕ್ರಿಯಿಸಲಿದೆ ಎಂದರು.

ಎರಡೂ ಕಡೆಯವರು ತಮ್ಮ ನಿಲುವಿನಿಂದ ಹಿಂದೆ ಸರಿಯದ ಕಾರಣ, ಸಂಧ್ಯಾ ರೇ ಅವರು ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಿದರು. ಅದಕ್ಕೂ ಮುನ್ನ ಕಲಾಪವನ್ನು ಎರಡು ಸಲ ಮುಂದೂಡಲಾಗಿತ್ತು. ಆ ಬಳಿಕ ರಾಹುಲ್ ಅವರು

» ನಾಲ್ಕನೇ ಪುಟದಲ್ಲಿ

# ಬೀದಿ ರಂಪಾಟ ಮಾಡಿ ಗೌರವ ಕಳೆಯಬೇಡಿ

## ಪ್ರೀತಮ್ ಜೆ. ಗೌಡಗೆ ನಿಖಿಲ್ ಕುಮಾರಸ್ವಾಮಿ ತಿರುಗೇಟು

• ಪ್ರಜೋದಯ ವರದಿ

**ಅರಕಲಗೂಡು:** ಬಿಜೆಪಿ ರಾಷ್ಟ್ರೀಯ ಪಕ್ಷವಾಗಿದ್ದು, ಉಲ್ಲಂಘನೆ ಮಾಡುವವರ ಬಗ್ಗೆ ಶಿಸ್ತು ಪಾಲನಾ ಸಮಿತಿ ತೀರ್ಮಾನ ಕೈಗೊಳ್ಳಲಿದೆ. ಹಾದಿ ಬೀದಿಯಲ್ಲಿ ರಂಪಾಟ ಮಾಡಿಕೊಂಡು, ಎರಡು ಪಕ್ಷದ ಕಾರ್ಯಕರ್ತರ, ನಾಯಕರ ಗೌರವ ಕಳೆಯಬಾರದೆಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಪ್ರೀತಮ್ ಜೆ. ಗೌಡ ಅವರಿಗೆ ತಿರುಗೇಟು ನೀಡಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮೈತ್ರಿ ಕುರಿತು ಪ್ರೀತಮ್ ಗೌಡ ಅವರು ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಸೋಮವಾರ ಕೆಲಗಳಲೆ ಗ್ರಾಮದಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ಚರ್ಚೆ ಮಾಡುವುದು ಅಪ್ರಸ್ತುತ. ಯಾವುದೇ ಸಮಸ್ಯೆ ಬಗೆಹರಿಯಬೇಕಾದರೂ ಕಾಲ ಬರಬೇಕು, ಸ್ವಾಭಾವಿಕವಾಗಿ ಸಾರ್ವಜನಿಕ ವಲಯದಲ್ಲಿ ಚುನಾ



ಯಿತ ಪ್ರತಿನಿಧಿಗಳು ಚರ್ಚೆ ಮಾಡಿದ ಸಂದರ್ಭದಲ್ಲಿ ಕಾರ್ಯಕರ್ತರಲ್ಲಿ ಇರುಸು ಮುರುಸು ಆಗಿರುವುದು ಸತ್ಯ. ಅದನ್ನು ಮಾಧ್ಯಮದ ಮುಂದೆ ಮಾತನಾಡಿ ಇತ್ಯರ್ಥ ಆಗುವುದು ಏನು ಇಲ್ಲವೆಂದು ಹೇಳಿದರು.

ಜೆಡಿಎಸ್ ನಾಯಕತ್ವ ಕುಮಾರಣ್ಣ ಅವರ ಕೈಯಲ್ಲಿದೆ. ದೇವೇಗೌಡರ ಮಾರ್ಗದರ್ಶನ ಹಾಗು ರೇವಣ್ಣ ಅವರ ರಾಜಕೀಯ ಶಕ್ತಿ ಪಕ್ಷಕ್ಕೆ ಬಲವಾಗಿದೆ. ಜೆಡಿಎಸ್ ಪ್ರಾದೇಶಿಕ ಪಕ್ಷವಾಗಿದ್ದರೂ, ಕಳೆದ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಹಿತದೃಷ್ಟಿಯಿಂದ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದ್ದೇವೆ. ಅದರ ಫಲವಾಗಿ ರಾಜ್ಯದ ಜನರು 19 ಸಂಸದರನ್ನು ಗೆಲ್ಲಿಸಿದ್ದಾರೆ ಎಂದರು.

ಕುಮಾರಸ್ವಾಮಿ ಅವರು ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಆಗಬೇಕೋ, ಯಾವಾಗ ರಾಜ್ಯ ರಾಜಕಾರಣಕ್ಕೆ ಮರಳಬೇಕೋ ಎಂಬುದನ್ನು ಬಿಜೆಪಿಯ ರಾಷ್ಟ್ರೀಯ ನಾಯಕರು ಚರ್ಚಿಸಿ ನಿರ್ಣಯ ಕೈಗೊಳ್ಳಲಿದ್ದಾರೆ. ಪಕ್ಷದ ವರಿಷ್ಠರು, ಕಾರ್ಯಕರ್ತರ ಗೌರವವನ್ನು ಕಾಪಾಡಿಕೊಳ್ಳುವ ದೃಷ್ಟಿಯಲ್ಲಿ, ಕ್ಷೇತ್ರವನ್ನು ಉಳಿಸಿಕೊಳ್ಳಲು ಆಯಾ ಸಂದರ್ಭದಲ್ಲಿ ಒಳ್ಳೆಯ ತೀರ್ಮಾನ ತೆಗೆದುಕೊಳ್ಳುತ್ತಾರೆಂದು ಪಕ್ಷದ ಕಾರ್ಯಕರ್ತನಾಗಿ ನಂಬಿಕೆ ಇಟ್ಟುಕೊಂಡಿದ್ದೇನೆಂದು ಹೇಳಿದರು.

ಜನರೊಂದಿಗೆ ಜನತಾದಳ ಕಾರ್ಯಕ್ರಮದಲ್ಲಿ 52 ಕ್ಷೇತ್ರದಲ್ಲಿ 9 ಸಾವಿರ ಕಿಲೋ ಮೀಟರ್ ಪ್ರವಾಸ ಮಾಡಿದ್ದೆ, ಎಲ್ಲೇ ಹೋದರೂ ಇಂದಿನ

» ನಾಲ್ಕನೇ ಪುಟದಲ್ಲಿ

## ಚಿರತೆ ದಾಳಿ: ಇಬ್ಬರು ಕಾರ್ಮಿಕರಿಗೆ ಗಾಯ

• ಪ್ರಜೋದಯ ವರದಿ



**ಬೇಲೂರು:** ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರ ಮೇಲೆ ಚಿರತೆ ದಾಳಿ ನಡೆಸಿ, ಇಬ್ಬರನ್ನು ಗಂಭೀರವಾಗಿ ಗಾಯಗೊಳಿಸಿರುವ ತಾಲ್ಲೂಕಿನ ಗಡಿ ಗ್ರಾಮ ಗೌತಹಳ್ಳಿಯಲ್ಲಿ ಸೋಮವಾರ ಬೆಳಿಗ್ಗೆ ನಡೆದಿದೆ. ಸುಲ್ತಾನ, ಸಬೀನಾ ಚಿರತೆ ದಾಳಿಗೆ ಒಳಗಾಗಿದ್ದಾರೆ.

ಗೌತವಳ್ಳಿ ತಾಲ್ಲೂಕಿನ ಗೋಡು ಚುಂಗನಹಳ್ಳಿ ಗಡಿಗೆ ಸೇರಿದ್ದು, ಅರಣ್ಯ ಪ್ರದೇಶಕ್ಕೆ ಸಮೀಪ ಇರುವುದರಿಂದ ಚಿರತೆಗಳ ಸಂಚಾರ ಹೆಚ್ಚಾಗಿದೆ. ಇದೇ ಭಾಗದಲ್ಲಿ ಚಂದ್ರೇಗೌಡ ಅವರ ಕಾಫಿ ತೋಟದಲ್ಲಿ ಮಹಿಳಾ ಕಾರ್ಮಿಕರು ಸುಣ್ಣ ಚೆಲ್ಲುವ ಕೆಲಸದಲ್ಲಿ ತೊಡಗಿದ್ದಾಗ, ಏಕಾ ಏಕಿ ಎರಡು ಚಿರತೆ ದಾಳಿ ನಡೆಸಿವೆ. ದಾಳಿಯಲ್ಲಿ ಸುಲ್ತಾನ ಹಾಗೂ ಸಬೀನಾ ಎಂಬ ಮಹಿಳೆಯರು ಗಂಭೀರ ಗಾಯಗೊಂಡಿದ್ದಾರೆ.

ಈ ವೇಳೆ ನೆಲಕ್ಕೆ ಬಿದ್ದು ಮಹಿಳೆಯರು ಕಿರುಚಿಕೊಂಡಾಗ ಇತರೆ ಕಾರ್ಮಿಕರು ಓಡಿ ಬಂದು ಚಿರತೆಗಳನ್ನು ಓಡಿಸಿದ್ದಾರೆ ಎನ್ನಲಾಗಿದೆ. ಗಾಯಾಳುಗಳನ್ನು ತಕ್ಷಣ ಮೂಡಿಗೆರೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ದಾಳಿ ಸುದ್ದಿ ತಿಳಿದು ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಚಿರತೆ ಸಂಚಾರವಿರುವುದರಿಂದ ತೋಟ ಪ್ರದೇಶಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ಹಾಗೂ ಗ್ರಾಮಸ್ಥರು ಎಚ್ಚರಿಕೆ ವಹಿಸಲು ಅಧಿಕಾರಿಗಳು ಸೂಚಿಸಿದ್ದಾರೆ. ಚಿರತೆಗಳನ್ನು ಹಿಡಿದು ಸುರಕ್ಷಿತವಾಗಿ ಸ್ಥಳಾಂತರಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಚಿರತೆ ದಾಳಿಯಿಂದ ಗೌತವಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಭಯದ ವಾತಾವರಣ ಆವರಿಸಿದೆ

# ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ರಕ್ಷಣೆ ನೀಡಲು ನಿಷೇಧಾಜ್ಞೆ ಜಾರಿ


## ಭೂ ಸಂತ್ರಸ್ತರ ಪ್ರತಿಭಟನೆ ಪರಿಣಾಮ | ಮಾ.7ರ ವರೆಗೆ ಬಿಗಿ ಭದ್ರತೆಯಲ್ಲಿ ಕೆಲಸ

• ಪ್ರಜೋದಯ ವರದಿ

**ಸಕಲೇಶಪುರ:** ರಾಷ್ಟ್ರೀಯ ಹೆದ್ದಾರಿ 75ರ ಬೆಂಗಳೂರು-ಮಂಗಳೂರು ನಡುವೆ ರಸ್ತೆ ಕಾಮಗಾರಿಯನ್ನು ನಿಗದಿತ ಗಡುವಿನೊಳಗೆ ಮುಗಿಸಬೇಕೆಂದು ಪಣ ತೊಟ್ಟಿರುವ ಜಿಲ್ಲಾಡಳಿತ ವ್ಯಾಪ್ತಿಯ ರೈತರ ಪ್ರತಿಭಟನೆಗೆ ಮುನ್ನೆಚ್ಚರಿಕೆ ಕ್ರಮವಾಗಿ ನಿಷೇಧಾಜ್ಞೆ ಜಾರಿಗೊಳಿಸಿದೆ.

ತಾಲ್ಲೂಕಿನ ಎನ್‌ಹೆಚ್ 75ರ 222+900ರಲ್ಲಿ ಮಂಜ್ರಾಬಾದ್ ಕೋಟೆ ಸಮೀಪ ದೋಣಿಗಾಲ್ ಪ್ರದೇಶದಲ್ಲಿ ರಸ್ತೆ ಕಾಮಗಾರಿ ಪ್ರಾರಂಭಿಸಲಾಗಿದೆ. ಆದರೆ, ಸೂಕ್ತ ಪರಿಹಾರ ಕಲ್ಪಿಸಬೇಕೆಂದು ರಸ್ತೆ ಪಕ್ಕದ ಭೂ ಮಾಲೀಕರು ಪ್ರತಿಭಟನೆಗೆ ಮುಂದಾಗಿದ್ದಾರೆ. ಈ ಹಿನ್ನಲೆಯಲ್ಲಿ ದೋಣಿಗಲ್ ರಸ್ತೆಯಿಂದ ಕೆಸಗನಹಳ್ಳಿ ರಸ್ತೆವರೆಗೆ ಕಾಮಗಾರಿ ನಡೆಯುವ 100 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಸೋಮವಾರ ಆದೇಶಿಸಿದ್ದಾರೆ.

ಹಾಸನ ಬೈಪಾಸ್ ರಸ್ತೆಯಿಂದ ದೋಣಿಗಾಲ್ ವಿಭಾಗದ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕಾಗಿರುವುದರಿಂದ ಫೆ. 9 ರಿಂದ ಮಾ.7ರ ವರೆಗೆ ಆದೇಶ ಜಾರಿಯಲ್ಲಿರಲಿದೆ. ನಿಷೇಧಿತ ಪ್ರದೇಶದಲ್ಲಿ 5ಕ್ಕಿಂತ ಹೆಚ್ಚು ಜನರು ಗುಂಪಾಗಿ ಸೇರುವಂತಿಲ್ಲ. ಈ ಅವಧಿಯಲ್ಲಿ ಆಯುಧ ಹಾಗು ಮಾರಕಾಸ್ತ್ರಗಳೊಂದಿಗೆ ಓಡಾಡುವಂತಿಲ್ಲ. ಯಾವುದೇ ರೀತಿಯ ಪ್ರಚಾರ, ಘೋಷಣೆ ಕೂಗಲು ಅವಕಾಶವಿರುವುದಿಲ್ಲ. ಈ ಆದೇಶವು ಕಾಮಗಾರಿ ನಡೆಸುವ ಅಧಿಕಾರಿ ಅಥವಾ ಸಿಬ್ಬಂದಿಗೆ ಅನ್ವಯವಾಗುವುದಿಲ್ಲ. ಈ ನಿಬಂಧನೆಗಳನ್ನು ಉಲಂಘಿಸಿದರೆ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದೆಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದ್ದಾರೆ.



### ಕಾಮಗಾರಿ ಸ್ಥಳದಲ್ಲಿ ಬಿಗಿ ಭದ್ರತೆ

2026ರ ಜೂನ್ ಅಂತ್ಯದೊಳಗೆ ಕಾಮಗಾರಿ ಮುಗಿಸಬೇಕೆಂಬ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸಿದ್ದಾರೆ. ದಶಕಗಳಿಂದ ಕಾಮಗಾರಿ ಕುಂಟುತ್ತಾ ಸಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಹಾಗು ಸಂಸದ ಶ್ರೇಯಸ್ ಪಟೇಲ್ ಅವರು ಹಲವು ಬಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದರು. ನಿಗದಿತ ಗಡುವಿನೊಳಗೆ ಕೆಲಸ ಮುಗಿಸಬೇಕಿರುವುದರಿಂದ ಹೆಚ್ಚಿನ ಗಮನ ಹರಿಸಲಾಗಿದೆ. ಪರಿಹಾರಕ್ಕಾಗಿ ಭೂಮಾಲೀಕರು ಪ್ರತಿಭಟನೆ ನಡೆಸಿದರೆ ಕಾಮಗಾರಿ ಹಿನ್ನಡೆಯಾಗುತ್ತದೆಂದು ಜಿಲ್ಲಾಧಿಕಾರಿ ನಿಷೇಧಾಜ್ಞೆ ಅಸ್ತ್ರ ಪ್ರಯೋಗಿಸಿದ್ದಾರೆ.

**ಪರಿಹಾರ ನೀಡದಿದ್ದರೆ ಕೆಲಸ ಬೇಡ**

ಹಾಸನ ಸಮೀಪದ ಕಂದಲಿಯಿಂದ ಹೆಗ್ಗದ್ದೆವರೆಗೆ ರಸ್ತೆ ಕಾಮಗಾರಿಯಿಂದ ವ್ಯಾಪಕ ಹಾನಿ ಉಂಟಾಗಿದೆ. ಭೂಮಿ ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ನೀಡಬೇಕು. ಇಲ್ಲವಾದರೆ ಕಾಮಗಾರಿಗೆ ಅವಕಾಶ ಮಾಡಿಕೊಡುವುದಿಲ್ಲವೆಂದು ಗ್ರಾಮಸ್ಥರು ಹಾಗು ರೈತರು ಪ್ರತಿಭಟನೆ ನಡೆಸಿದರು.

ಐದು ವರ್ಷಗಳ ಹಿಂದೆ ಆರಂಭವಾದ ರಸ್ತೆ ಕಾಮಗಾರಿಯ ವೇಳೆ ಮಳೆಗಾಲದ ನೀರು ಸರಾಗವಾಗಿ ಹರಿಯಲು ಅಗತ್ಯ ಚರಂಡಿ, ನೀರು ಹರಿವಿನ ವ್ಯವಸ್ಥೆ ಮಾಡದೆ ಸುಮಾರು 120 ಅಡಿಗೂ ಹೆಚ್ಚು ಎತ್ತರದಲ್ಲಿ ಮಣ್ಣು ತುಂಬಲಾಗಿದೆ. ಪರಿಣಾಮ ಮಳೆಗಾಲದಲ್ಲಿ

» ನಾಲ್ಕನೇ ಪುಟದಲ್ಲಿ

# ಪ್ರೀತಮ್ ಗೌಡ ವಿರುದ್ಧ ಎ.ಮಂಜು ವಾಗ್ದಾಳಿ

## ಸ್ಥಳೀಯ ಸಂಸ್ಥೆಯಲ್ಲಿ ಮೈತ್ರಿ ಬೇಡವೆನ್ನಲು ಅವರೇನು ಹೈಕಮಾಂಡಾ?

• ಪ್ರಜೋದಯ ವರದಿ

**ಅರಕಲಗೂಡು:** ಸಾರ್ವತ್ರಿಕ ಚುನಾವಣೆಗೆ ಮಾತ್ರ ಮೈತ್ರಿ ಬೇಕು, ಸ್ಥಳೀಯ ಸಂಸ್ಥೆ ಚುನಾವಣೆಗೆ ಮೈತ್ರಿ ಬೇಡವೆಂದು ಹೇಳಲು ಪ್ರೀತಂಗೌಡ ಯಾರು, ಅವರೇನು ಹೈಕಮಾಂಡಾ ಎಂದು ಮಾಜಿ ಸಚಿವ ಎ.ಮಂಜು ಅವರು ಪ್ರಶ್ನಿಸಿದರು.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದರು ಅವರು, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಗೆ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ ವಿರೋಧ ವ್ಯಕ್ತಪಡಿಸಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಪ್ರೀತಂಗೌಡಗೆ ಹೇಳಬೇಕಿರುವುದು ಹೈಕಮಾಂಡ್. ಅಂತಿಮ ತೀರ್ಮಾನ



ಮಾಡುವವರು ಹೈಕಮಾಂಡ್‌ನವರು ಎಂದರು.

ಮುಂದಿನ ದಿನಗಳಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಯಾಗಿ ಮುಂದುವರಿದರೆ ರಾಜ್ಯದಲ್ಲಿ ಸುಭದ್ರ ಸರ್ಕಾರ ಬರಲಿದೆ ಎನ್ನುವ ಅಭಿಪ್ರಾಯ ಜನರಲ್ಲಿ ಇದೆ. ಎಂಎಲ್‌ಎ ಚುನಾವಣೆಗೆ ಮಾತ್ರ ಮೈತ್ರಿ ಬೇಕು, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗೆ ಬೇಡವೆಂದರೆ ಅವರಿಗೆ ಯಾವ ನೈತಿಕತೆ ಇರುತ್ತದೆ. ಪಕ್ಷ ಕಾರ್ಯಕರ್ತರಿಗಾಗಿ ಇರಬೇಕು, ನಮ್ಮ ವೈಯಕ್ತಿಕ ಲಾಭಕ್ಕಾಗಿ ರಾಜಕಾರಣವಲ್ಲವೆಂದು ವಾಗ್ದಾಳಿ ನಡೆಸಿದರು.

ಮೈತ್ರಿಗೂ ಮೊದಲು ಲೋಕಸಭಾ ಚುನಾವಣೆಯಲ್ಲಿ ಹಾಸನದಲ್ಲಿ ಬಿಜೆಪಿ ಸೋಲಿನ ಕುರಿತು ಪ್ರತಿಕ್ರಿಯಿಸಿದ ಅವರು, ಪಕ್ಷದ ನಿಷ್ಠೆ ಇದ್ದಿದ್ದರೆ ಹಾಸನ ಜಿಲ್ಲೆಯಲ್ಲಿ ಬಿಜೆಪಿ ಸಂಸದ ಇರುತ್ತಿದ್ದರು. ಯಾರ ಜೊತೆ ಕೈ ಜೋಡಿಸಿದರು, ಏಕೆ ಜೋಡಿಸಿದರೆಂಬುದನ್ನು ಅವರೇ ಆತ್ಮಾವಲೋಕನ ಮಾಡಿಕೊಳ್ಳಬೇಕೆಂದು ಟಾಂಗ್ ನೀಡಿದರು.

ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಹಾಸನ ಕ್ಷೇತ್ರದಿಂದ ತಮಗೆ ಟಿಕೆಟ್ ಸಿಗಲಿದೆ ಎಂಬ ಮಾಜಿ ಶಾಸಕ ಪ್ರೀತಂಗೌಡ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಟಿಕೆಟ್ ಕೊಡುವುದು ಬಿಡುವುದು ಹೈಕಮಾಂಡ್ ನಿರ್ಧಾರ. ಈಗಾಗಲೇ ನಮ್ಮ ಪಕ್ಷದ ಶಾಸಕರು ಇದ್ದಾಗ ಬೇರೆಯವರಿಗೆ ಟಿಕೆಟ್ ಕೊಡಲು ಸಾಧ್ಯವೇ ಎಂದು ಪ್ರಶ್ನಿಸಿ, ಟಿಕೆಟ್ ನೀಡುವ ಮೊದಲು ಪಕ್ಷದಲ್ಲಿ ಸರ್ವೆ ಮಾಡಲಾಗುತ್ತದೆ. ಗೆಲುವಿನ ಸಾಮರ್ಥ್ಯ ಇರುವವರಿಗೆ ಆದ್ಯತೆ ಸಿಗುತ್ತದೆ. ಈ ಹಿಂದೆ 50 ಸಾವಿರ ಮತಗಳ ಅಂತರದಲ್ಲಿ

» ನಾಲ್ಕನೇ ಪುಟದಲ್ಲಿ

## ನಗರದಲ್ಲಿ ವೇಶ್ಯಾವಾಟಿಕೆ ಜಾಲಪತ್ತೆ

• ಪ್ರಜೋದಯ ವರದಿ

**ಹಾಸನ:** ಅಂಗವಿಕಲ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ ಆರೋಪಿಯನ್ನು ಪೊಲೀಸರು ಬಂಧಿಸಲು ತೆರಳಿದ್ದ ವೇಳೆ ನಗರದಲ್ಲಿ ವೇಶ್ಯಾವಾಟಿಕೆ ಜಾಲವೊಂದು ಪತ್ತೆಯಾಗಿದೆ.

ಲೈಂಗಿಕ ದೌರ್ಜನ್ಯ ಎಸಗಿದ್ದ ಆರೋಪಿ ಆಯಿಷ್ ವೇಶ್ಯಾವಾಟಿಕೆ ನಡೆಸುತ್ತಿದ್ದ ಕಿಂಗ್‌ಪಿನ್ ಆಗಿದ್ದಾನೆ. ಆತನಿಗೆ ಸಹಕಾರ ನೀಡುತ್ತಿದ್ದ ಪ್ರಮೀಳಾ ಎಂಬಾಕೆಯನ್ನು ಬಂಧಿಸಿ, ನಾಲ್ವರು ಸಂತ್ರಸ್ತೆಯರನ್ನು ರಕ್ಷಿಸಲಾಗಿದೆ.ಆರೋಪಿ ಆಯಿಷ್ ನಗರದ ವ್ಯಾಪ್ತಿಯ ಗುಡ್ಡೇನಹಳ್ಳಿಕೊಪ್ಪಲು ಪ್ರದೇಶದ ಮನೆಯೊಂದರಲ್ಲಿ ಇರುವ ಮಾಹಿತಿ ಆಧರಿಸಿ ಮಹಿಳಾ ಠಾಣೆಯ ಇನ್ಸ್‌ಪೆಕ್ಟರ್ ಪಾಲಾಕ್ಷ ಪ್ರಭು ಹಾಗು ಸಿಬ್ಬಂದಿ ದಾಳಿ ನಡೆಸಿದ್ದಾರೆ. ಈ ವೇಳೆ ಮನೆಯಲ್ಲಿ ಸಂತ್ರಸ್ತೆಯರು

» ನಾಲ್ಕನೇ ಪುಟದಲ್ಲಿ


# ಗ್ಯಾರಂಟಿಗಳ ಹಾವಳಿಯಿಂದ ಅನುದಾನದ ಅಭಾವ

## ರಾಜ್ಯದ ಆರ್ಥಿಕ ಪರಿಸ್ಥಿತಿ ದುರ್ಬಲ: ಡಾ.ಸೂರಜ್ ರೇವಣ್ಣ

• ಪ್ರಜೋದಯ ವರದಿ

**ಅರಕಲಗೂಡು:** ರಾಜ್ಯದ ಆರ್ಥಿಕ ಪರಿಸ್ಥಿತಿ ದುರ್ಬಲವಾಗಿರುವುದು ರಾಜ್ಯದ ಜನರಿಗೆ ಸ್ಪಷ್ಟವಾಗಿ ಕಾಣಿಸುತ್ತಿದೆ. ಒಂದೆಡೆ ಗ್ಯಾರಂಟಿಗಳ ಹಾವಳಿ, ಮತ್ತೊಂದೆಡೆ ಅನುದಾನದ ಅಭಾವ ಎದುರಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ಅವರು ಟೀಕಿಸಿದರು.

ತಾಲ್ಲೂಕಿನ ಕೆಲಗಳಲೆ ಗ್ರಾಮದಲ್ಲಿ ಸುದ್ದಿಗಾರರಿಗೆ ನಿಗಮ ಮಂಡಳಿ ಅಧ್ಯಕ್ಷರಿಗೆ ಸಚಿವ ದರ್ಜೆ ಸ್ಥಾನಮಾನ ನೀಡಿ, ವೇತನ ಹಾಗು ಬಾಡಿಗೆ ಹೆಚ್ಚಳ ಮಾಡುವ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ವಿರೋಧ ಪಕ್ಷದವರು ಮಾತ್ರವಲ್ಲ, ಆಡಳಿತ ಪಕ್ಷದ ಶಾಸಕರೇ ತಮ್ಮ ಕ್ಷೇತ್ರಗಳಿಗೆ ಅನುದಾನ ಸಿಗುತ್ತಿಲ್ಲ, ಅಭಿವೃದ್ಧಿ ಆಗುತ್ತಿಲ್ಲವೆಂದು ಪಕ್ಷದ ಸಭೆಗಳಲ್ಲಿ ಹಾಗು



ಸಾರ್ವಜನಿಕವಾಗಿ ಅಳಲು ತೋಡಿಕೊಳ್ಳುತ್ತಿರುವುದು ರಾಜ್ಯದ ಆರ್ಥಿಕ ಸ್ಥಿತಿಯ ಪ್ರತಿಬಿಂಬವಾಗಿದೆ ಎಂದರು.

ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸರ್ಕಾರ ಯಾವ ಮಟ್ಟಕ್ಕೆ ತೆಗೆದುಕೊಂಡು ಹೋಗುತ್ತದೋ ನೋಡಬೇಕಿದೆ. ಎಲ್ಲಿಯೂ ಶಾಶ್ವತವಾದ, ಸಾರ್ವಜನಿಕರಿಗೆ ಅನುಕೂಲವಾಗುವ, ಅಗತ್ಯವಿರುವ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದ ಅವರು, ಹಿಂದೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಜನಪ್ರಿಯ ಕಾರ್ಯಕ್ರಮಗಳನ್ನು ನೀಡಿದ್ದರು. ಆದರೆ, ಇಂದಿನ ಪರಿಸ್ಥಿತಿ ಮತ್ತು ಆಗಿನ ಪರಿಸ್ಥಿತಿಯನ್ನು ಹೋಲಿಸಿ ಚಿಂತನೆ ಮಾಡಬೇಕಾಗಿದೆ. ಮುಂದಿನ ದಿನಗಳಲ್ಲಿ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು. ಈ

» ನಾಲ್ಕನೇ ಪುಟದಲ್ಲಿ

## ಮನೆ ಮುಂದೆ ನಿಲ್ಲಿಸಿದ್ದ ಕಾರಿಗೆ ಬೆಂಕಿ



• ಪ್ರಜೋದಯ ವರದಿ

**ಹಾಸನ:** ಮನೆಯ ಮುಂದೆ ನಿಲ್ಲಿಸಿದ್ದ ಕಾರು ಆಕಸ್ಮಿಕವಾಗಿ ಬೆಂಕಿಗಾಹುತಿಯಾಗಿರುವ ಘಟನೆ ದೇವೇಗೌಡ ನಗರದಲ್ಲಿ ಸೋಮವಾರ ನಡೆದಿದೆ.

ದೇವೇಗೌಡ ನಗರದ ನಿವಾಸಿಯೊಬ್ಬರು ತಮ್ಮ ಮನೆಯ ಮುಂಭಾಗದಲ್ಲಿ ಕಾರನ್ನು ನಿಲ್ಲಿಸಿದ್ದರು. ಬೆಳಿಗ್ಗೆ 11.30ರ ಸಮಯದಲ್ಲಿ ಕಾರಿನಲ್ಲಿ ದಿಢೀರ್ ಬೆಂಕಿ ಕಾಣಿಸಿಕೊಂಡಿದೆ. ಕ್ಷಣಾರ್ಧದಲ್ಲಿ ಬೆಂಕಿಯ ಕೆನ್ನಾಲಿಗೆ ಕಾರಿನಾದ್ಯಂತ ವ್ಯಾಪಿಸಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿಸಿತ್ತು. ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಹೈಕೋರ್ಟ್ ಆದೇಶ | ಸದ್ಯದಲ್ಲೇ ಆಡಳಿತ ಮಂಡಳಿ ಜಟಾಪಟಿಗೆ ತೆರೆ

# ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ: ಫೆ.12 ರಂದು ಅವಿಶ್ವಾಸ ಮಂಡನೆ

• ಪ್ರಜೋದಯ ವರದಿ

**ಹಾಸನ:** ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಆಡಳಿತ ಮಂಡಳಿಯ ಅಧಿಕಾರಕ್ಕಾಗಿ ಎರಡು ಬಣಗಳ ನಡುವೆ ನಡೆಯುತ್ತಿರುವ ಜಟಾಪಟಿ ಕೊನೆಗೊಳಿಸಲು ಹೈಕೋರ್ಟ್ ಮುಂದಾಗಿದೆ. ಅದಕ್ಕಾಗಿ ಫೆ.12ರಂದು ಮತ್ತೊಮ್ಮೆ ಅವಿಶ್ವಾಸ ನಿರ್ಣಯ ಪ್ರಕ್ರಿಯೆ ನಡೆಸುವಂತೆ ಸೂಚನೆ ನೀಡಿದೆ.

ಈ ಸಂಬಂಧ ಸೋಮವಾರ ವಿಚಾರಣೆ ನಡೆಸಿದ ಹೈಕೋರ್ಟ್, ಅವಿಶ್ವಾಸ ನಿರ್ಣಯವನ್ನು ಕಾನೂನು ಬದ್ಧವಾಗಿ ನಡೆಸಿ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಿದೆ. ಅದರಂತೆ, ಹಿರಿಯ ವಕೀಲ ಎಂ.ಎನ್. ಉಮಾಶಂಕರ್ ಅವರನ್ನು ವೀಕ್ಷಕರಾಗಿ ನೇಮಕ ಮಾಡಿದೆ. ಅವರ ಸಮ್ಮುಖದಲ್ಲಿ ಫೆ.12ರಂದು ಮಧ್ಯಾಹ್ನ 12 ಗಂಟೆಗೆ ಸಭೆ ನಡೆಸಿ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಬೇಕೆಂದು ಆದೇಶಿಸಲಾಗಿದೆ. ಸಭೆಯ ಸಂಪೂರ್ಣ ವಿವರಗಳೊಂದಿಗೆ ಸಹಿ ಸಂಗ್ರಹ, ವೀಡಿಯೊ ಚಿತ್ರೀಕರಣ ಸೇರಿ ಎಲ್ಲಾ ದಾಖಲಾತಿ

» ನಾಲ್ಕನೇ ಪುಟದಲ್ಲಿ




> **ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಗೆ ಸಂಬಂಧಪಟ್ಟಂತೆ ಕೋರ್ಟ್‌ನಲ್ಲಿರುವ ಮೊಕದ್ದಮೆಗಳಲ್ಲಿ ಸದಸ್ಯರನ್ನು ಅಮಾನತುಗೊಳಿಸಿರುವುದಕ್ಕೆ ಕೆಳಗಿನ ನ್ಯಾಯಾಲಯವೇ ತಡೆಯಾಜ್ಞೆ ನೀಡಿದೆ. ಅವಿಶ್ವಾಸ ಮಂಡನೆಗೆ ಒಂದು ವರ್ಷವಾದರೂ ಆಗಿರಬೇಕೆಂಬ ವಿಷಯ ಬಂದಾಗ ಈಗ ಒಂದು ವರ್ಷವಾಗಿರುವುದರಿಂದ ಎರಡು ಕಡೆಯವರು ಒಪ್ಪಿದ್ದರಿಂದ ಮತ್ತೊಮ್ಮೆ ಅವಿಶ್ವಾಸ ಮಂಡನೆಗೆ ಹೈಕೋರ್ಟ್ ಅವಕಾಶ ನೀಡಿದೆ. ಅವಿಶ್ವಾಸದ ವರದಿ ಬಂದ ನಂತರ ಕೋರ್ಟ್‌ನಲ್ಲಿ ಮತ್ತೆ ವಾದ ಮುಂದುವರೆಯುತ್ತದೆ.**
>
> **- ಅಶೋಕ್ ಹಾರನಹಳ್ಳಿ, ಮಾಜಿ ಅಧ್ಯಕ್ಷ ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ.**

> **ಹೈಕೋರ್ಟ್ ಫೆ.12ರಂದು ಅವಿಶ್ವಾಸ ನಿರ್ಣಯ ಪ್ರಕ್ರಿಯೆ ನಡೆಸಲು ಸ್ಪಷ್ಟ ನಿರ್ದೇಶನ ನೀಡಿ, ವೀಕ್ಷಕರನ್ನು ಕಳುಹಿಸಿಕೊಡಲಿದೆ. ಅವಿಶ್ವಾಸ ಸಾಬೀತು ಪಡಿಸಲು 13 ಸದಸ್ಯರ ಅಗತ್ಯವಿದ್ದು, ನಮ್ಮ ಬಣದಲ್ಲಿ 14 ಸದಸ್ಯರಿದ್ದೇವೆ. ಸದ್ಯದಲ್ಲೇ ಎಲ್ಲಾ ಗೊಂದಲಗಳಿಗೆ ತೆರೆ ಬೀಳಲಿದೆ.**
>
> **-ಬಿ.ಆರ್.ಗುರುದೇವ್, ಸದಸ್ಯ ಮಲೆನಾಡು ಶಿಕ್ಷಣ ಸಂಸ್ಥೆ**

> **ಫೆ.12ರಂದು 2/3 ಸಂಖ್ಯಾಬಲದ ಮಾನದಂಡದಂತೆ ಮತ್ತೊಮ್ಮೆ ಅವಿಶ್ವಾಸ ನಿರ್ಣಯ ಮಂಡಿಸಲು ಹೈಕೋರ್ಟ್ ಅವಕಾಶ ಕಲ್ಪಿಸಿದೆ. ಪ್ರಸ್ತುತ ನಮ್ಮ ಬಳಿ 10 ನಿರ್ದೇಶಕರ ಸ್ಪಷ್ಟ ಬೆಂಬಲವಿದ್ದು, ಇನ್ನೂ 23 ನಿರ್ದೇಶಕರು ನಮ್ಮೊಂದಿಗೆ ಕೈಜೋಡಿಸುವ ವಿಶ್ವಾಸವಿದೆ. ನಾವು ಮೊದಲ ದಿನದಿಂದಲೇ ನ್ಯಾಯಾಲಯದ ಆದೇಶಗಳನ್ನು ಗೌರವಿಸಿ, ಕಾನೂನಾತ್ಮಕವಾಗಿ ಆಡಳಿತ ನಡೆಸಿಕೊಂಡು ಬಂದಿದ್ದೇವೆ. ಈಗಲೂ ಹೈಕೋರ್ಟ್ ನೀಡಿರುವ ಮಧ್ಯಂತರ ಆದೇಶವನ್ನು ಗೌರವದಿಂದ ಸ್ವಾಗತಿಸುತ್ತೇವೆ.**
>
> **-ಜಗದೀಶ್ ಚೌಡುವಳ್ಳಿ, ಕಾರ್ಯದರ್ಶಿ, ಮಲೆನಾಡು ಶಿಕ್ಷಣ ಸಂಸ್ಥೆ**

## 50 ಕ್ಕೂ ಹೆಚ್ಚು ತೆಂಗಿನ ಮರಗಳು ಬೆಂಕಿಗಾಹುತಿ



• ಪ್ರಜೋದಯ ವರದಿ

**ಹಾಸನ :** ತೆಂಗಿನ ತೋಟಕ್ಕೆ ಬೆಂಕಿ ಬಿದ್ದು 50ಕ್ಕೂ ಹೆಚ್ಚು ತೆಂಗಿನ ಮರಗಳು ಬೆಂಕಿಗಾಹುತಿಯಾಗಿರುವ ಘಟನೆ ತಾಲ್ಲೂಕಿನ ತಾಲ್ಲೂಕಿನ ಕಮ್ಮರಿಗೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ದೇವರಾಜೇಗೌಡ ಅವರ ಪುತ್ರ ಜಯರಾಮ್ ಎಂಬುವವರಿಗೆ ಸೇರಿದ ತೆಂಗಿನ ತೋಟಕ್ಕೆ ದುಷ್ಕರ್ಮಿಗಳು ಬೆಂಕಿ ಹಾಕಿದ್ದು, ಎಂಟು ವರ್ಷಗಳಿಂದ ಬೆಳೆಸಿದ್ದ ಮರಗಳು ಫಸಲಿಗೆ ಬರುವ ಹಂತದಲ್ಲಿದ್ದವು. ಒಣಗಿದ ಜೋಳಕ್ಕೆ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದರಿಂದ, ಬೆಂಕಿಯ ಜ್ವಾಲೆ ಇಡೀ ತೋಟಕ್ಕೆ ವ್ಯಾಪಿಸಿದೆ. ಪರಿಣಾಮವಾಗಿ ಹಚ್ಚ ಹಸಿರಾಗಿದ್ದ ತೆಂಗಿನ ತೋಟವೀಗ ಬರಡು ಭೂಮಿಯಂತಾಗಿದೆ.

ಬೇಸಿಗೆಯಯಲ್ಲಿ ಟ್ಯಾಂಕರ್ ಮೂಲಕ ನೀರನ್ನು ಹಾಕಿ ತೆಂಗಿನ ಮರಗಳನ್ನು ಅವರು ಮಗುವಿನಂತೆ ಸಲಹಿದ್ದರು. ಅವರ ಕಣ್ಣೆದುರೇ ಸುಟ್ಟು ಕರಕಲಾಗಿರುವುದನ್ನು ಕಂಡು ಜಯರಾಮ್ ಕಂಗಾಲಾಗಿದ್ದಾರೆ. ಫಸಲು ನೀಡುವ ಹಂತದಲ್ಲಿದ್ದ ಮರಗಳನ್ನು ಕಳೆದುಕೊಂಡು ಬೀದಿಗೆ ಬರುವಂತಾಗಿದೆ ಎಂದು ಕಣ್ಣೀರು ಹಾಕಿದರು.

# 20 ಕೋ. ರೂ. ವೆಚ್ಚದ ವಿದ್ಯುತ್ ವಿತರಣಾ ಉಪಕೇಂದ್ರ

## ನೂತನ ಉಪ ಕೇಂದ್ರದಿಂದ ನಿರಂತರ ವಿದ್ಯುತ್: ಶಾಸಕ ಸಿಮೆಂಟ್ ಮಂಜು ಉವಾಚ

• ಪ್ರಜೋದಯ ವರದಿ

**ಆಲೂರು:** ಹಲವು ವರ್ಷಗಳ ಬೇಡಿಕೆಯಾಗಿದ್ದ ವಿದ್ಯುತ್ ವಿತರಣಾ ಉಪಕೇಂದ್ರ ನಿರ್ಮಾಣದಿಂದ ಪಾಳ್ಯ ಕಸಬಾ ಹೋಬಳಿಯ ಬಹುತೇಕ ಭಾಗಗಳಿಗೆ ನಿರಂತರ ಹಾಗು ವಿದ್ಯುತ್ ಸರಬರಾಜು ಲಭ್ಯವಾಗಲಿದೆ. ಇದರಿಂದ ಕೃಷಿ ಚಟುವಟಿಕೆಗಳಿಗೆ ಮತ್ತಷ್ಟು ಬಲ ಸಿಗಲಿದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ತಾಲ್ಲೂಕಿನ ಪಾಳ್ಯ ಹೋಬಳಿಯ ದಾನಿಹಳ್ಳಿ ಗ್ರಾಮದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಲಿರುವ ನೂತನ ವಿದ್ಯುತ್ ವಿತರಣಾ ಉಪಕೇಂದ್ರಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಶೇ.80 ಕ್ಕೂ ಹೆಚ್ಚು ರೈತರಿದ್ದು, ಅವರಿಗೆ ನಿರಂತರ ವಿದ್ಯುತ್ ಹಾಗೂ ನೀರು ದೊರೆತರೆ



ಸ್ವಾವಲಂಬಿ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದರು.

ಈ ಮಹತ್ವದ ಯೋಜನೆಗೆ ಸಹಕಾರ ನೀಡಿದ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರಿಗೆ ಕೃತಜ್ಞತೆ ಸಲ್ಲಿಸಿದ ಶಾಸಕರು, ಕೊಡಗಿಹಳ್ಳಿ ವಿದ್ಯುತ್ ವಿತರಣಾ ಉಪಕೇಂದ್ರ ಸ್ಥಾಪನೆಗೂ ಈಗಾಗಲೇ ಸಚಿವರಲ್ಲಿ ಮನವಿ ಮಾಡಲಾಗಿದ್ದು, ಜಾಗದ ಸಮಸ್ಯೆ ಬಗೆಹರಿದಿದೆ. ಶೀಘ್ರದಲ್ಲೇ ಅಲ್ಲಿಯೂ ಭೂಮಿಪೂಜೆ ನೆರವೇರಿಸಲಾಗುವುದು ಎಂದು ಅವರು ಭರವಸೆ ನೀಡಿದರು.

ಬ್ಯಾಬ ಅರಣ್ಯ ಪ್ರದೇಶದಲ್ಲಿನ ಪುನರ್ವಸತಿ ಕುಟುಂಬಗಳಿಗೆ ನೀಡಿರುವ ಜಮೀನಿಗೆ ಸರಿಯಾದ ದಾಖಲೆಗಳಿಲ್ಲದೆ ಜನರು ಸಂಕಷ್ಟ ಅನುಭವಿಸುತ್ತಿದ್ದು, ಅವರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ಗಮನ ಸೆಳೆಯಲಾಗಿದೆ ಎಂದರು.

ಅಲ್ಲದೇ ಎಪಿಎಂಸಿ ಮಾರುಕಟ್ಟೆ ಸ್ಥಾಪನೆಗಾಗಿ ತಾಲ್ಲೂಕಿನ ಹಿರಿಯರು ನಡೆಸಿದ ಹೋರಾಟ ಶೀಘ್ರದಲ್ಲೇ ಫಲ ನೀಡಲಿದೆ. ತಾಲ್ಲೂಕಿನ ರೈತರ ಹಲವು ಸಮಸ್ಯೆಗಳನ್ನು ಆದಷ್ಟು ಬೇಗ ಬಗೆಹರಿಸುವುದಾಗಿ ತಿಳಿಸಿದರು.

ಸೆಸ್ಕ್ ಕಾರ್ಯ ನಿರ್ವಾಹಕ ಇಂಜಿನಿಯರ್ ಶಿವಾನಂದ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವಿ ಕುಮಾರ್, ಪಾಳ್ಯ ಸೆಸ್ಕ್ ಜೆಇ ಶಶಿಕಿರಣ್, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಸುಬ್ರಹ್ಮಣ್ಯ, ಹೆಚ್ಚುವರಿ ತಹಸೀಲ್ದಾರ್ ಪ್ರಭಾಕರ್, ವಿಜಯಕುಮಾರ್, ನೇತ್ರಾವತಿ, ಉಮಾ ರವಿಪ್ರಕಾಶ್, ಎ.ಹೆಚ್.ರಮೇಶ್, ರಘು ಪಾಳ್ಯ, ಕೃಷ್ಣಮೂರ್ತಿ, ಪಿಡಿಒ ದರ್ಶನ್ ಇನ್ನಿತರರು ಉಪಸ್ಥಿತರಿದ್ದರು.

### ವಾಟೆಹೊಳೆ, ಯಗಚಿ ಜಲಾಶಯಕ್ಕೆ ಕಾಯಕಲ್ಪ

ವಾಟೆಹೊಳೆ ಜಲಾಶಯದ ಕಾಲುವೆ ದುರಸ್ತಿ ಆಗದೆ 18 ಸಾವಿರ ಹೆಕ್ಟರ್ ಬದಲು ಕೇವಲ 5 ಸಾವಿರ ಹೆಕ್ಟರ್ ಪ್ರದೇಶಕ್ಕೆ ಮಾತ್ರ ನೀರು ಹರಿಯುತ್ತಿದೆ. ಜೊತೆಗೆ ಯಗಚಿ ಜಲಾಶಯ ಆಲೂರಿನ ಭಾಗಗಳಲ್ಲಿ ಹರಿದರೂ ರೈತರಿಗೆ ಪ್ರಯೋಜನವಾಗಿಲ್ಲ, ಈ ಬಗ್ಗೆ ವಿಧಾನಸಭೆಯಲ್ಲಿ ಜಲಸಂಪನ್ಮೂಲ ಸಚಿವರ ಗಮನ ಸೆಳೆದಿದ್ದು, ಸಮಸ್ಯೆ ಪರಿಹಾರಕ್ಕೆ ಭರವಸೆ ಲಭಿಸಿದೆ. ಕಾಲುವೆ ದುರಸ್ತಿ ಮಾಡಿ ಸಂಪೂರ್ಣ 18 ಸಾವಿರ ಹೆಕ್ಟರ್ ಪ್ರದೇಶಕ್ಕೆ ನೀರು ಹಾಯಿಸುವವರೆಗೂ ಹೋರಾಟ ಮುಂದುವರಿಸುತ್ತೇನೆ ಎಂದರು.

# ಉತ್ತಮ ಜೀವನ ಸಾಗಿಸಿದವನು ಬಹುಕಾಲ ಉಳಿಯುತ್ತಾನೆ

• ಪ್ರಜೋದಯ ವರದಿ

**ಅರಸೀಕೆರೆ:** ಜನ ಮೆಚ್ಚಿದರೆ ಸಾಲದು ಜನಾರ್ಧನನನ್ನು ಮೆಚ್ಚುವಂತೆ ಬದುಕು ನಡೆಸಿದ ಮನುಷ್ಯ ದೈಹಿಕವಾಗಿ ಅಳಿದ ಮೇಲೂ ಜನರ ಮನಸ್ಸಿನಲ್ಲಿ ಬಹುಕಾಲ ಉಳಿಯುತ್ತಾನೆ ಎಂದು ಸುಕ್ಷೇತ್ರ ಹಾರನಹಳ್ಳಿ ಕೋಡಿಮಠದ ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಜಿ ಅವರು ಹೇಳಿದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಗೀಜಿಹಳ್ಳಿ ಧರ್ಮಶೇಖರ್ ಅವರ ತಂದೆಯ ಶಿವ ಗಣರಾಧನೆಯ ಧಾರ್ಮಿಕ ಸಮಾರಂಭದಲ್ಲಿ ಪಾಲ್ಗೊಂಡು ಆಶೀರ್ವಚನ ನೀಡಿದ ಶ್ರೀಗಳು, ಭಗವಂತನ ಸಂಕಲ್ಪದಂತೆ ಜೀವ ತಾಳಿ ಭೂಮಿಗೆ ಬರುವ ಮನುಷ್ಯ ಭೂಮಿಯ ಮೇಲೆ ಇರುವಷ್ಟು ದಿನಗಳ ಕಾಲ ಹೆತ್ತು -ಹೊತ್ತು ಸಾಕಿದ ತಂದೆ ತಾಯಿಯರನ್ನ ಗುರು ಹಿರಿಯರನ್ನ ಗೌರವದಿಂದ ಕಾಣುತ್ತಾ ಕೈಲಾದಷ್ಟು ಸಮಾಜಕ್ಕೆ ದಾನ ಧರ್ಮ ಮಾಡುವ ಮನಸ್ಥಿತಿ ತೋರುವ ಮನುಷ್ಯನನ್ನು ಜನ ಮಾತ್ರ ಅಲ್ಲ ಜನಾರ್ಧನನನು ಮೆಚ್ಚುತ್ತಾನೆ ಎಂದರು.



ಸಮಾಜಮುಖಿಯಾಗಿ ಎಲ್ಲರೊಂದಿಗೂ ಒಂದಾಗಿ ಸಾರ್ಥಕ ಜೀವನ ನಡೆಸಿ ಮಕ್ಕಳಿಗೆ ಆಸ್ತಿ ಮಾಡುವುದಕ್ಕಿಂತ ತುಸು ಹೆಚ್ಚಾಗಿಯೇ ತಮ್ಮ ಮಕ್ಕಳನ್ನು ಸಮಾಜದ ಆಸ್ತಿಯನ್ನಾಗಿ ಕೊಟ್ಟು ಹೋಗಿರುವ ಶಂಕರಪ್ಪನವರು ಇಂದು ದೈಹಿಕವಾಗಿ ನಮ್ಮೊಂದಿಗೆ ಇಲ್ಲದಿದ್ದರೂ ಅವರ ಸೇವಾ ಕಾರ್ಯದ ಮೂಲಕ ಅಮರರಾಗಿದ್ದಾರೆ ಎಂದು ಹೇಳಿದರು.

ರಾಜ್ಯಗೃಹ ನಿರ್ಮಾಣ ಮಂಡಳಿಯ ಅಧ್ಯಕ್ಷರು ಆದ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಮಾತನಾಡಿ, ಶಂಕ್ರಪ್ಪ ಅವರ ನಡೆ- ನುಡಿ ನಮ್ಮೆಲ್ಲರಿಗೂ ಆದರ್ಶವಾಗಿದೆ. ಅವರು ತೋರಿದ ಹಾದಿಯಲ್ಲಿ ನಾವೆಲ್ಲ ಸಾಗೋಣ ಸಮಾಜಕ್ಕೆ ನಮ್ಮ ಕೈಲಾದಷ್ಟು ಅಳಿಲು ಸೇವೆ ಸಲ್ಲಿಸೋಣ ಎಂದು ತಮ್ಮ ನುಡಿ ನಮನ ಸಲ್ಲಿಸಿದರು.

ಲೋಕಸಭಾ ಸದಸ್ಯ ಶ್ರೇಯಸ್ ಪಟೇಲ್ ಸೇರಿದಂತೆ ಶಿವ ಗಣರಾಧನೆ ಸಮಾರಂಭದಲ್ಲಿ ನಾನಾ ರಾಜಕೀಯ ಪಕ್ಷಗಳ ಮುಖಂಡರು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಅಪಾರ ಬಂಧು ಬಾಂಧವರು ಪಾಲ್ಗೊಂಡಿದ್ದರು.

### ಫೆ.15ರಂದು ಶ್ರೀ ಸಂತ ಸೇವಾಲಾಲ್ ಜಯಂತಿ

ಹಾಸನ: ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಫೆ.15 ರಂದು ಬೆಳಿಗ್ಗೆ 11 ಗಂಟೆಗೆ ಸಂತ ಸೇವಾಲಾಲ್ ಜಯಂತಿ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ, ಶಾಸಕ ಸ್ವರೂಪ್ ಪ್ರಕಾಶ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಸದ ಶ್ರೇಯಸ್ ಎಂ.ಪಟೇಲ್, ಶಾಸಕರಾದ ಶಾಸಕ ಕೆ.ಎಂ ಶಿವಲಿಂಗೇಗೌಡ, ಹೆಚ್.ಡಿ.ರೇವಣ್ಣ, ಸಿ.ಎನ್ ಬಾಲಕೃಷ್ಣ, ಎ.ಮಂಜು, ಹೆಚ್.ಕೆ.ಸುರೇಶ್, ಸಿಮೆಂಟ್ ಮಂಜು ಭಾಗವಹಿಸಲಿದ್ದಾರೆ. ಜಿಲ್ಲಾ ಬಂಜಾರ ಸಂಘದ ಉಪಾಧ್ಯಕ್ಷ ಧರ್ಮಪ್ಪ ಉಪನ್ಯಾಸ ನೀಡಲಿದ್ದಾರೆ.

### ಕಟ್ಟಡ ಬಾಡಿಗೆಗೆ ನೀಡಲು ಅರ್ಜಿ ಆಹ್ವಾನ

**ಹಾಸನ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಿರ್ವಹಿಸಲಾಗುತ್ತಿರುವ ಸುಮಾರು 250 ವಿದ್ಯಾರ್ಥಿನಿಯರಿರುವ ಮೆಟ್ರಿಕೆ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಬಾಡಿಗೆ ಕಟ್ಟಡದ ಅವಶ್ಯಕತೆ ಇದ್ದು, ಎಲ್ಲಾ ಅಗತ್ಯ ಮೂಲಭೂತ ಸೌಕರ್ಯ ಒಳಗೊಂಡಿರುವ, ಕಟ್ಟಡ ಮಾಲಿಕರಿಂದ ಅರ್ಜಿ ಆಹ್ವಾನಿಸಲಾಗಿದ್ದು, ನೀರಿನ ವ್ಯವಸ್ಥೆ, ಶೌಚಾಲಯ ಮತ್ತು ಸ್ನಾನಗೃಹಗಳ ವ್ಯವಸ್ಥೆ, ಊಟದ ಹಾಲ್ ಸೇರಿದಂತೆ ಮೂಲಭೂತ ಸೌಲ್ಯಭ ಹೊಂದಿರಬೇಕು.

ಸಹಾಯಕ ನಿರ್ದೇಕರು ಗ್ರೇಡ್-1, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಗೆ ಭೇಟಿ ನೀಡಿ ಪಡೆದುಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ತಾಲ್ಲೂಕು ಆಸ್ಪತ್ರೆಗೆ ಡಯಾಲಿಸಿಸ್ ಕೇಂದ್ರ ತಂದಿದ್ದು ಹೆಗ್ಗಳಿಕೆ: ರೇವಣ್ಣ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದ ಸರ್ಕಾರಿ ಆಸ್ಪತ್ರೆ ಮತ್ತಷ್ಟು ಸವಲತ್ತು ನೀಡುವ ಮೂಲಕ ಸ್ಥಳೀಯವಾಗಿಯೇ ಇನ್ನೂ ಹೆಚ್ಚಿನ ಚಿಕಿತ್ಸೆಗೆ ಅನುಕೂಲವಾಗುವಂತೆ ಮಾಡಲು ಶಾಸಕ ಎಚ್.ಡಿ. ರೇವಣ್ಣ ಮುಂದಾಗಿದ್ದಾರೆ.

ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರೊಂದಿಗೆ ಸಭೆ ನಡೆಸಿದ ಅವರು, ರಾಜ್ಯದಲ್ಲೇ ಮೊದಲ ಬಾರಿಗೆ ಡೆಯಾಲಿಸಿಸ್ ಕೇಂದ್ರವನ್ನು ತಾಲ್ಲೂಕು ಆಸ್ಪತ್ರೆಗೆ ತಂದಿದ್ದು ನಮ್ಮ ಹೆಗ್ಗಳಿಕೆ. ತಾಲ್ಲೂಕಿನಲ್ಲಿ 4 ಸಮುದಾಯ ಆಸ್ಪತ್ರೆಗಳನ್ನು ತೆರೆದಿದ್ದು ನಮ್ಮ ಸರ್ಕಾರದ ಅವಧಿಯಲ್ಲಿಯೇ. ಪ್ರಸ್ತುತ 350 ಹಾಸಿಗೆ ಸಾಮಥ್ಯ ಇರುವ ಪಟ್ಟಣದ ಆಸ್ಪತ್ರೆಯಲ್ಲಿ ಪ್ರತ್ಯೇಕ ಎರಡು ತೀವ್ರ ನಿಗಾ



ಘಟಕಗಳನ್ನು ಸ್ಥಾಪಿಸಲಾಗಿದೆ. ಇದೀಗ 80 ಲಕ್ಷ ರೂ. ವೆಚ್ಚದಲ್ಲಿ ಲಿಫ್ಟ್, ತಾಯಿ -ಮಕ್ಕಳ ಆಸ್ಪತ್ರೆ ಸೇರಿದಂತೆ ತಲಾ 20 ಲಕ್ಷ ರೂ. ವೆಚ್ಚಗೊಳಿಸಿ ಎರಡೂ ಕಡೆ ಶುದ್ದ ನೀರಿನ ಸ್ಥಾವರ ಸ್ಥಾಪಿಸಬೇಕಿದೆ ಎಂದರು.

ಸಿಟಿ ಸ್ಕ್ಯಾನ್ ನಿರ್ವಹಣೆಗೆ ವರ್ಷವಿಡೀ 27 ಲಕ್ಷ ರೂ. ವೆಚ್ಚಗೊಳಿಸಬೇಕಿದೆ. ಎಲ್ಲಕ್ಕೂ ಮುಖ್ಯವಾಗಿ 65 ಲಕ್ಷ ರೂ. ವೆಚ್ಚದಲ್ಲಿ ಹೈಟೆಕ್ ಮತ್ತು ಅತ್ಯಾಧುನಿಕ ಯಂತ್ರೋಪಕರಣಗಳುಳ್ಳ ಪ್ರಯೋಗಶಾಲೆ ಪ್ರಾರಂಭಿಸಬೇಕು. ಅಲ್ಟಾಸೌಂಡ್ ಸ್ಕ್ಯಾನಿಂಗ್ ಯಂತ್ರ ಖರೀದಿಸಿ ಅಳವಡಿಸಬೇಕಿದೆ ಎಂದು ಹೇಳಿದರು.

ಬಿಸಿನೀರಿನ ಅನುಕೂಲತೆ ಹಾಗೂ ವಿದ್ಯುತ್‌ಲೈನ್ ಬದಲಾವಣೆಗೊಳಿಸಿ ಸಕಲ ಅನುಕೂಲತೆ ಮಾಡಬೇಕಿದೆ. ವೈದ್ಯರಿಗೆ ಅಗತ್ಯ ಸಲಕರಣೆ, ಯಂತ್ರಗಳ ಖರೀದಿಸಲು ಸಹ ಕೇಂದ್ರ ಸರ್ಕಾರದ ಸಿ ಆಡ್ ಆರ್ ಎಫ್ ಅನುದಾನ ಕೋರಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಪತ್ರ ಬರೆಯುವುದಾಗಿಯೂ ಅವರು ತಿಳಿಸಿದರು.

ಈಗಾಗಲೇ ಪ್ರತಿ ತಾಲೂಕಿನ ಗ್ರಾಮೀಣ ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 65 ಲಕ್ಷ ರೂ. ಅನುದಾನದಲ್ಲಿ ತಾಲ್ಲೂಕಿನ ಪಡುವಲಹಿಪ್ಪೆ, ದೊಡ್ಡಹಳ್ಳಿ, ಬಿಟ್ಟಗೌಡನಹಳ್ಳಿ, ನಾಗಲಾಪುರ, ಚಿಚನಹಳ್ಳಿ, ಎಲೆಚಾಗಹಳ್ಳಿ, ದೊಡ್ಡಬ್ಯಾಗತವಳ್ಳಿ, ಬಾಗೀವಾಳು, ಮೂಡಲಹಿಪ್ಪೆ, ಚನ್ನರಾಯಪಟ್ಟಣ ತಾಲ್ಲೂಕಿನ ಆನೆಕರೆ, ಅಲ್ಪೋನ್ಸ್ ನಗರ, ಉದಯಪುರ, ಯಾಚೆನಹಳ್ಳಿ, ದೊಡ್ಡ ಕರಡೇವು, ನೊರನಕ್ಕಿ ಆಯುಷ್ಮಾನ್ ಆರೋಗ್ಯ ಮಂದಿರ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. ಸಾರ್ವಜನಿಕರ ಸಂಖ್ಯೆ ಪಟ್ಟಣದ ಮತ್ತು ಗ್ರಾಮೀಣ ಭಾಗದ ಆಸ್ಪತ್ರೆಗಳಲ್ಲಿ ಹೆಚ್ಚಿರುವ ಇಂದಿನ ಆರೋಗ್ಯ ಪರಿಸ್ಥಿತಿಗೆ ತಕ್ಕಂತೆ ಮೇಲ್ದರ್ಜೆಗೆ ಏರಿಸಲಾಗುವುದು. ಅಗತ್ಯ ವೈದ್ಯರ ಕೊರತೆ ತುಂಬಲು ಹಂಗಾಮಿ ವೈದ್ಯರನ್ನು ನೇಮಕಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ರೇವಣ್ಣ ಅವರು ಮಾಹಿತಿ ನೀಡಿದರು.

ಆಡಳಿತ ವೈದ್ಯಾಧಿಕಾರಿ ಡಾ. ಮಂಜುಳ, ಹಿರಿಯ ವೈದ್ಯರುಗಳಾದ ಡಾ.ನಟರಾಜ್, ಡಾ.ಸೆಲ್ವಕುಮಾರ್ ಸೇರಿದಂತೆ ಹಲವು ತಜ್ಞರು ಈ ಸಂದರ್ಭದಲ್ಲಿ ಹಾಜರಿದ್ದರು.

### ಇಂದು ವಿದ್ಯುತ್ ವ್ಯತ್ಯಯ

**ಹಾಸನ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಿಯಿಂದ 66/11 ಕೆ.ವಿ. ಶಾಂತಿಗ್ರಾಮ ವಿ.ವಿ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸಗಳನ್ನು ಹಮ್ಮಿಕೊಂಡಿರುವುದರಿಂದ ಫೆ.11 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಶಾಂತಿಗ್ರಾಮ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಶಾಂತಿಗ್ರಾಮ, ಕೆಂಚಟ್ಟಹಳ್ಳಿ, ಮಡೆನೂರು, ಯೋಗಿಹಳ್ಳಿ, ಮರ್ಕುಲಿ, ಮೆಲ್ಲಹಳ್ಳಿ, ಗಾಡೇನಹಳ್ಳಿ, ಹಂಪನಹಳ್ಳಿ, ಸಾರಾಪುರ, ಕಾರೆಕೆರೆ, ನಾಗನಹಳ್ಳಿ, ದೇವಿಹಳ್ಳಿ, ಹೆಗ್ಗಡಿಹಳ್ಳಿ, ಕೃಷಿಕಲೇಜು, ಪಿ.ಜಿ.ಸಿ.ಐ.ಎಲ್ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾರ್ಯಚರಣೆಗಳ ವಿಭಾಗದ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೀಘ್ರವೇ ಕೋರ್ಟ್ ಸಂಕೀರ್ಣ ಲೋಕಾರ್ಪಣೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಕೋರ್ಟ್ ಸಂಕೀರ್ಣದ ಕಾಮಗಾರಿ ಬಹುತೇಕ ಕೊನೆಯ ಹಂತದಲ್ಲಿದ್ದು, ಬಾಕಿಯಿರುವ ವಿದ್ಯುತ್ ಕಾಮಗಾರಿಯನ್ನು ಶೀಘ್ರ ಮುಗಿಸಿ ಮುಂದಿನ 45 ದಿನಗಳೊಳಗೆ ಕೋರ್ಟ್ ಸಂಕೀರ್ಣ ಸಾರ್ವಜನಿಕರ ಸೇವೆಗೆ ಲಭ್ಯವಾಗಲಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ತಿಳಿಸಿದರು.

ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಬಹುಮಹಡಿ ಕೋರ್ಟ್ ಕಾಮಗಾರಿಯನ್ನು ಅಧಿಕಾರಿಗಳೊಂದಿಗೆ ಭೇಟಿ ನೀಡಿ ವೀಕ್ಷಿಸಿ ಮಾತನಾಡಿದ ಅವರು, ಶೇ.90ರಷ್ಟು ಸಿವಿಲ್ ಕಾಮಗಾರಿ ಪೂರ್ಣಗೊಂಡಿದ್ದು, ಕೊನೆ ಹಂತದ ಎಲೆಕ್ಟ್ರಿಕ್ ಕಾಮಗಾರಿಯಷ್ಟೆ ಬಾಕಿಯಿದೆ. ಸೆಸ್ಕಾಂಗೆ ಪ್ರಸ್ತಾವನೆ ಸಲ್ಲಿಕೆಯಾಗಿ



1.06 ಲಕ್ಷ ಹಣ ಕಟ್ಟುವಂತೆ ವಿದ್ಯುತ್ ಗುತ್ತಿಗೆದಾರರಿಗೆ ಇಲಾಖೆ ಸೂಚಿಸಿದ್ದು, ಆತ ಇನ್ನೂ ಹಣ ಕಟ್ಟದಿರುವ ಬಗೆ ದೂರವಾಣಿ ಮೂಲಕ ವಿದ್ಯುತ್ ಗುತ್ತೀಗೆದಾರನಿಗೆ ಶೀಘ್ರ ಹಣ ಕಟ್ಟಿ ಕಾಮಗಾರಿ ಮುಗಿಸುವಂತೆ ಸೂಚಿಸಲಾಗಿದೆ. ಆತ ಬುಧವಾರದೊಳಗೆ ಹಣ ಕಟ್ಟಿ ಕಾಮಗಾರಿ ಪ್ರಾರಂಭಿಸುವುದಾಗಿ ಹೇಳಿದ್ದಾರೆ ಎಂದರು.

ಗುತ್ತಿಗೆಯಲ್ಲಿ ಸೇರದ ಲಿಫ್ಟ್ ಅಳವಡಿಕೆ, ಕ್ಯಾಬೀನ್, ಫರ್ನಿಚರ್, ಮತ್ತು ಕಾರಿಡಾರ್‌ನಲ್ಲಿ ಇಂಟರ್ ಲಾಕ್, ಲಾನ್ ಕಾಮಗಾರಿಯನ್ನು ತಮ್ಮ ಮನವಿ ಮೇರೆಗೆ ಗುತ್ತಿಗೆದಾರರು ಮಾಡಿದ್ದು, ಹೆಚ್ಚುವರಿ ಕಾಮಗಾರಿಗೆ ಹೆಚ್ಚುವರಿ ಹಣವನ್ನು ಸರ್ಕಾರದಿಂದ ಕೊಡಿಸುವ ಕೆಲಸ ಮಾಡಲಾಗುವುದು, ಈಗಾಗಲೇ ಎಲ್ಲ 7 ಕೋರ್ಟ್ ಹಾಲ್‌ಗಳಿಗೂ ಅವಶ್ಯವಿರುವ ಪೀಠೋಪಕರಣಗಳೆಲ್ಲಾ ಸಿದ್ದಗೊಂಡಿವೆ. ಜೋಡಣೆ ಕಾರ್ಯವಾಗಬೇಕಷ್ಟೆ, ತ್ವರಿತವಾಗಿ ಕಾಮಗಾರಿ ಮುಗಿಸಿ 45 ದಿನಗಳಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಅವಕಾಶ ಮಾಡಿಕೊಡಲಾಗುವುದು ಎಂದರು.

ಈ ವೇಳೆ ಟಿಎಪಿಸಿಎಂಎಸ್ ಅಧ್ಯಕ್ಷ ಹೆಚ್.ಆರ್.ವೆಂಕಟೇಶ್‌ಮೂರ್ತಿ, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಡಿ.ಕೆ.ಹರೀಶ್, ಕಾರ್ಯದರ್ಶಿ ಹೇಮಂತ್, ಉಪಾಧ್ಯಕ್ಷ ದಿನೇಶ್, ಖಜಾಂಚಿ ಚೇತನ್‌ಕುಮಾರ್, ಮಹಿಳಾ ಜಂಟಿ ಕಾರ್ಯದರ್ಶಿ ಸುಷ್ಮಾ, ಟಿಎಪಿಸಿಎಂಎಸ್ ನಿರ್ದೇಶಕ, ವಕೀಲ ಬೋರೇಗೌಡ, ಧರ್ಮಪ್ಪ, ಎಂ.ಆರ್. ಚಂದ್ರು, ನಟರಾಜ್, ಕುಂಭೇನಹಳ್ಳಿ ಗಿರೀಶ್ ಸೇರಿ ಲೋಕಪಯೋಗಿ ಇಲಾಖೆ ಇಂಜಿನಿಯರ್ ರುಕ್ಮಿಣಿ, ಸಹಾಯಕ ಇಂಜಿನಿಯರ್ ಮಂಜಣ್ಣಗೌಡ, ಸೆಸ್ಕಾಂ ಇಂಜಿನಿಯರ್ ಹರೀಶ್ ಮತ್ತಿತರರು ಹಾಜರಿದ್ದರು.

### ಫೆ.26 ರಂದು ಕಾರ್ಯಾಗಾರ

**ಹಾಸನ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಗೂ ಟೆಕ್ಸಾಕ್, ಬೆಂಗಳೂರುರವರ ಸಂಯುಕ್ತಾಶ್ರದಲ್ಲಿ ಫೆ,26 ರಂದು ಬೆಳಗ್ಗೆ 10 ಗಂಟೆಗೆ ನವಕಿಸ್ ಕಾಲೇಜು ಆಫ್ ಇಂಜಿನಿಯರಿಂಗ್‌ನಲ್ಲಿ Incubation one day awareness progrAmmes Under RAMP ಯೋಜನೆಯಡಿಯಲ್ಲಿ ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಉದ್ದಿಮೆದಾರರು ಭಾಗವಹಿಸಿ ಸದರಿ ಕಾರ್ಯಗಾರಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಹಾಗೂ ಮಾಹಿತಿಗಾಗಿ ದೂರವಾಣಿ ಸಂಖ್ಯೆ-08172-296217, 240606 ಅಥವಾ ಜಿಲ್ಲಾ ಕೈಗಾರಿಕಾ ಕೇಂದ್ರ, ಡೈರಿ ಸರ್ಕಲ್, ಹಾಸನ ಸಂಪರ್ಕಿಸಬಹುದಾಗಿದೆ.

# ಎಸ್‌ಐಆರ್ ಅಡೆತಡೆ ಸೃಷ್ಟಿಸದಂತೆ ಸುಪ್ರೀಂ ಎಚ್ಚರಿಕೆ

• ಪ್ರಜೋದಯ ವರದಿ

**ಹೊಸದಿಲ್ಲಿ:** ಮತದಾರರ ಪಟ್ಟಿ ಪ್ರಕ್ರಿಯೆಯ ವಿಶೇಷ ತೀವ್ರ ಪರಿಷ್ಕರಣೆ ವಿಚಾರ ಪಶ್ಚಿಮ ಬಂಗಾಳದಲ್ಲಿ ಸದ್ದು ಮಾಡುತ್ತಿದೆ. ಸಿಎಂ ಮಮತಾ ಬ್ಯಾನರ್ಜಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದಾರೆ. ಈ ಬಗ್ಗೆ ಸುಪ್ರೀಂ ಕೋರ್ಟ್ ಪಶ್ಚಿಮ ಬಂಗಾಳ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ. ಎಸ್‌ಐಆರ್ ಅನ್ನು ಪೂರ್ಣಗೊಳಿಸುವಲ್ಲಿ ಯಾವುದೇ ಅಡೆತಡೆಗಳನ್ನು ಸೃಷ್ಟಿಸದಂತೆ ಸುಪ್ರೀಂ ಕೋರ್ಟ್ ಸೋಮವಾರ ಪಶ್ಚಿಮ ಬಂಗಾಳ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ.

ಈ ಪ್ರಕ್ರಿಯೆಯಲ್ಲಿನ ನಿಜವಾದ ತೊಂದರೆಗಳನ್ನು ಪರಿಹರಿಸಲಾಗುವುದು ಎಂದು ಸುಪ್ರೀಂಕೋರ್ಟ್ ಭರವಸೆ ನೀಡಿತು. ಬಂಗಾಳ ಎಸ್ ಐಆರ್‌ನಲ್ಲಿ ಪರಿಶೀಲನೆ ಅಥವಾ



ಅರ್ಜಿಗಳನ್ನು ಪೂರ್ಣಗೊಳಿಸಲು ಮತ್ತು ಡೇಟಾವನ್ನು ಅಂತಿಮಗೊಳಿಸಲು ನ್ಯಾಯಾಲಯವು ಒಂದು ವಾರದವರೆಗೆ ಗಡುವನ್ನು ವಿಸ್ತರಿಸಿದೆ.

**ಮಮತಾ ಬ್ಯಾನರ್ಜಿ ವಾಗ್ದಾಳಿ**

ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ವಾಟ್ಸಾಪ್ ಮೂಲಕ ಹೊರಡಿಸಲಾದ ಅಧಿಕೃತ ಸೂಚನೆಗಳನ್ನು ಕೊನೆಗೊಳಿಸುವಂತೆ ಕೋರಿ ಸುಪ್ರೀಂ ಕೋರ್ಟ್‌ನಿಂದ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಬದಲಾವಣೆಗಳನ್ನು ಕೋರಿದ್ದರು. ಎಲ್ಲಾ ನಿರ್ದೇಶನಗಳನ್ನು ಔಪಚಾರಿಕವಾಗಿ ಹೊರಡಿಸಬೇಕು ಮತ್ತು ಇಸಿಐ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಅದು ಒತ್ತಾಯಿಸಿತ್ತು ಮತ್ತು ಮೈಕ್ರೋ ವೀಕ್ಷಕರನ್ನು ತೆಗೆದು ಹಾಕುವಂತೆಯೂ ಕೋರಿತ್ತು, ಬದಲಿಗೆ 8,505 ಗ್ರೂಪ್ ಬಿ ಅಧಿಕಾರಿಗಳನ್ನು ನೇಮಿಸಲು ಪ್ರಸ್ತಾಪಿಸಿತ್ತು.

ನಾವು ಅಡೆತಡೆಗಳನ್ನು ತೆಗೆದು ಹಾಕುತ್ತೇವೆ. ಆದರೆ ಎಸ್‌ಐಆರ್ ಪೂರ್ಣಗೊಳಿಸುವಲ್ಲಿ ಯಾವುದೇ ಅಡೆತಡೆಗಳನ್ನು ಸೃಷ್ಟಿಸುವುದಿಲ್ಲ. ಅದರ ಬಗ್ಗೆ ನಮಗೆ ಸ್ಪಷ್ಟಪಡಿಸಲಿ ಎಂದು ಹೇಳುವ ಮೂಲಕ ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನ್ಯಾಯಾಲಯದ ನಿಲುವನ್ನು ಸ್ಪಷ್ಟಪಡಿಸಿದರು.

# ಕೇಂದ್ರ ಅರಣ್ಯ ಸಚಿವರ ಭೇಟಿಯಾದ ಕೆಜಿಎಫ್ ನಿಯೋಗ

• ಪ್ರಜೋದಯ ವರದಿ

**ನವದೆಹಲಿ:** ಕರ್ನಾಟಕ ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ ಅವರ ನೇತೃತ್ವದ ಕರ್ನಾಟಕ ಬೆಳೆಗಾರರ ಒಕ್ಕೂಟದ ನಿಯೋಗವು ಕೇಂದ್ರ ಅರಣ್ಯ ಸಚಿವ ಭೂಪೇಂದ್ರ ಯಾದವ್ ಅವರನ್ನು ಸೋಮವಾರ ಭೇಟಿಯಾಗಿ ಚರ್ಚಿಸಿತು.

ಚಿಕ್ಕಮಗಳೂರು, ಹಾಸನ ಮತ್ತು ಕೊಡಗು ಭಾಗಗಳಲ್ಲಿ ಹೆಚ್ಚಿರುವ ಕಾಡಾನೆ-ಮಾನವ ಸಂಘರ್ಷ ಕುರಿತು ನಿಯೋಗ ಸದಸ್ಯರು ಸಚಿವರ ಗಮನಕ್ಕೆ ತಂದರು. ಸಚಿವ ಭೂಪೇಂದ್ರ ಯಾದವ್ ಅವರು ಮಾತನಾಡಿ, ಗಂಭೀರ ಸಮಸ್ಯೆ ನಿವಾರಣೆಗಾಗಿ ಕೇಂದ್ರ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡುತ್ತದೆ. ಅದಕ್ಕೆ ಅಗತ್ಯ ನಿಧಿಯನ್ನು ಮೀಸಲಿಡಲಾಗಿದೆ. ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವಾಲಯದ ಹೆಚ್ಚುವರಿ ಮಹಾನಿರ್ದೇಶಕ ರಮೇಶ್ ಕೆ.



ಪಾಂಡೆ ಅವರು ಶೀಘ್ರ ಕಾಡಾನೆ ಹಾವಳಿ ಪೀಡಿತ ಪ್ರದೇಶಕ್ಕೆ ಭೇಟಿ ನೀಡಲಿದ್ದಾರೆಂದರು.

ನಂತರ ನಿಯೋಗವು ರಮೇಶ್ ಕೆ.ಪಾಂಡೆ ಅವರನ್ನು ಭೇಟಿ ಮಾಡಲಾಯಿತು. ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯು ಈಗಾಗಲೇ ಭಾರತದ ಸುಮಾರು 8 ರಾಜ್ಯಗಳಲ್ಲಿ ವ್ಯಾಪಿಸಿರುವ ಮಾನವ-ಆನೆ ಸಂಘರ್ಷದ ಕುರಿತು ಮಾಹಿತಿ ಹೊಂದಿರುವುದಾಗಿಯೂ ಈ ಸಮಸ್ಯೆಗೆ ಆದಷ್ಟು ಶೀಘ್ರವಾಗಿ ಪರಿಹಾರ ಕಂಡುಕೊಳ್ಳಲು ಸಮಗ್ರವಾದ ಕ್ರಿಯಾ ಯೋಜನೆ ಸಿದ್ದವಿರುವುದಾಗಿ ತಿಳಿಸಿದರು.

ನಿಯೋಗವು ಕೇಂದ್ರದ ಅರಣ್ಯ ಮತ್ತು ಪರಿಸರ ಸಚಿವಾಲಯದ ಜೊತೆ ನಿಕಟ ಸಂಪರ್ಕದಲ್ಲಿರುವಂತೆಯೂ ಮತ್ತು ರಾಜ್ಯ ಸರ್ಕಾರಕ್ಕೆ ಈ ಯೋಜನೆ ಜಾರಿಗೊಳಿಸಲು CAMPA ನಿಧಿಯಿಂದ ಹಣ ಒದಗಿಸಲು 16ನೇ ಯೋಜನೆಯಲ್ಲಿ ತೀರ್ಮಾನಕ್ಕೆ ಬರಲಾಗಿದೆ ಎಂದರು.

ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ, ಉಪಾಧ್ಯಕ್ಷ ಕೆ.ಕೆ. ವಿಶ್ವನಾಥ್, ಚಿಕ್ಕಮಗಳೂರು ಜಿಲ್ಲಾ ಬೆಳೆಗಾರರ ಸಂಘದ ಅಧ್ಯಕ್ಷ ಕೆ.ಯು. ರತೀಶ್, ಮೂಡಿಗೆರೆ ತಾಲ್ಲೂಕು ಬೆಳೆಗಾರರ ಸಂಘದ ಕಾರ್ಯದರ್ಶಿ ಮನೋಹರ್, ಸಚಿನ್ ಇತರರಿದ್ದರು.

# ಶ್ರೀಮಂತಿಕೆ, ಜಾತಿ ಮೇಲೆ ಜೀವನ ನಿರ್ಧಾರ ಆಗಲ್ಲ: ನಿಖಿಲ್

## ಕೆಲಗಳಲೆ ಗ್ರಾಮದಲ್ಲಿ ಶ್ರೀಕಲ್ಲೇಶ್ವರ-ಬಸವೇಶ್ವರ ದೇವಾಲಯ ಉದ್ಘಾಟನೆ

• ಪ್ರಜೋದಯ ವರದಿ

**ಅರಕಲಗೂಡು:** ನಮ್ಮ ಪೂರ್ವಿಕರು ಬಿಟ್ಟುಹೋಗಿರುವ ದೇಶೀಯ ಸಂಸ್ಕೃತಿ, ಪರಂಪರೆ, ಆಧ್ಯಾತ್ಮ ಚಿಂತನೆಗಳನ್ನು ಯುವಕರಾದ ನಾವುಗಳು ಮೈಗೂಡಿಸಿಕೊಂಡು ಗ್ರಾಮೀಣ ಮುಂದಿನ ಪೀಳಿಗೆಯನ್ನು ಗಟ್ಟಿಗೊಳಿಸುವ ಮಹಾನ್ ಕಾರ್ಯಗಳನ್ನು ಕೈಗೊಳ್ಳಬೇಕೆಂದು ಜೆಡಿಎಸ್ ರಾಜ್ಯ ಯುವ ಘಟಕ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಹೇಳಿದರು.

ತಾಲ್ಲೂಕಿನ ಮಲ್ಲಿಪಟ್ಟಣ ಹೋಬಳಿ ಕೆಲಗಳಲೆ ಗ್ರಾಮದಲ್ಲಿ ನೂತನವಾಗಿ ನಿರ್ಮಾಣ ಗೊಂಡಿರುವ ಶ್ರೀಕಲ್ಲೇಶ್ವರ ಮತ್ತು ಬಸವೇಶ್ವರ ದೇವಾಲಯ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಇಂತಹ ಧಾರ್ಮಿಕ ಸಮಾರಂಭ ಹಿನ್ನಲೆ ಸಾವಿರಾರು ಸಂಖ್ಯೆಯ ಜನರಿಗೆ ಅನ್ನದಾಸೋಹವನ್ನು ಆಯೋಜನೆ ಮಾಡಿರುವುದು ಅತ್ಯಂತ ಶ್ಲಾಘನೀಯ. ಈ ಭೂಮಿಯಲ್ಲಿ ಅನ್ನದಾಸೋಹವೇ ಅತ್ಯಂತ ಶ್ರೇಷ್ಠವಾದ ಕಾರ್ಯವಾಗಿದೆ. ಇದು ನಮ್ಮ ಶ್ರೀಮಂತಿಕೆ, ಜಾತಿ, ಧರ್ಮ ಅಥವಾ ಮನ್ಯಷ್ಯನ ಆರ್ಥಿಕ ಸ್ಥಿತಿಗತಿಯ ಮೇಲೆ ಜೀವನ ನಿರ್ಧಾರ ಆಗುವುದಿಲ್ಲ. ಭಗವಂತನ ಪುಣ್ಯ ಕಾರ್ಯದಲ್ಲಿ ಸಮಾಜವಾಗಿ ತೊಡಗಿಕೊಂಡಾಗ ಮಾತ್ರ ದೇವರ ಅನುಗ್ರಹ ದೊರೆಯುತ್ತದೆ ಎಂದರು.

ಮುಂದಿನ ದಿನಗಳಲ್ಲಿ ರೈತರ ಬದುಕು ಹಸನಗೊಳಿಸುವ ಸಲುವಾಗಿ ನಾವು ನೀರು ಕೊಡುವ ಕಾಯಕವನ್ನು ಮೊದಲ ಆದ್ಯತೆ ಮೇಲೆ ಕೈಗೊಳ್ಳಬೇಕಿದೆ. ಈ ಸಲುವಾಗಿ ಈ ಭಾಗದಲ್ಲಿ



ಮಲ್ಲಿಪಟ್ಟಣ ಏತನೀರಾವರಿ ಯೋಜನೆ ಅನುಷ್ಠಾನಕ್ಕೆ ಬರಲಿದೆ. ಈ ಕೆಲಸವನ್ನು ಕ್ಷೇತ್ರದ ಶಾಸಕರಾದ ಮಂಜಣ್ಣ ಅವರು ಸಹಕಾರಗೊಳಿಸಲಿದ್ದಾರೆಂದು ವಿಶ್ವಾಸ ವ್ಯಕ್ತಪಡಿಸಿದರು.

ಶಾಸಕ ಎ.ಮಂಜು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದು ಉದ್ಘಾಟನೆಗೊಂಡಿರುವ ನೂತನ ದೇವಾಲಯ ಅತ್ಯಂತ ವಿಶಿಷ್ಟವಾಗಿ ನಿರ್ಮಾಣಗೊಂಡಿದೆ. ಈ ಕಾಲದಲ್ಲಿ ದೇವಾಲಯವನ್ನು ಸಂಪೂರ್ಣವಾಗಿ ಕಲ್ಲಿನಿಂದ ಕಟ್ಟಲಾಗಿದೆ. ಇದು ಮುಂದಿನ ಹತ್ತಾರು ತಲೆಮಾರಿಗೆ ಉಳಿಯಲಿದೆ. ಮುಂದಿನ ನಾಲ್ಕೈದು ತಿಂಗಳಲ್ಲಿ ಮಲ್ಲಿಪಟ್ಟಣ ಏತನೀರಾವರಿ ಯೋಜನೆಗೆ ಮೊದಲ ಹಂತದ ಚಾಲನೆ ದೊರೆಯಲಿದೆ. ಮಲ್ಲಿಪಟ್ಟಣ ಭಾಗದಲ್ಲಿ ಕಂಡುಬರುತ್ತಿರುವ ಆನೆ ಹಾವಳಿ ನಿಯಂತ್ರಣಕ್ಕೆ ಸರ್ಕಾರ 40 ಕೋಟಿ ರೂ. ವೆಚ್ಚದಲ್ಲಿ ರೈಲ್ವೆ ಕಂಬಿಗಳ ಅಳವಡಿಕೆ ಕಾರ್ಯ ಆರಂಭಗೊಳ್ಳಲಿದೆ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ಮಾತನಾಡಿದರು. ಶ್ರೀ ಶಂಭುನಾಥ ಸ್ವಾಮೀಜಿ, ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಶ್ರೀ ಸದಾಶಿವ ಶಿವಾಚಾರ್ಯಸ್ವಾಮೀಜಿ, ಶ್ರೀಬಸವರಾಜೇಂದ್ರ ಸ್ವಾಮೀಜಿ ಆಶೀರ್ವಚನ ನೀಡಿದರು. ಊರಿನ ಮುಖಂಡರು, ಗಣ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## 30 ಕೋಟಿ ರೂ. ವೆಚ್ಚದ ರಾಜ್ಯ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದ ಕಾಮಗಾರಿಗೆ ಭೂಮಿ ಪೂಜೆ

# ಅಭಿವೃದ್ಧಿ ಕಾಮಗಾರಿ ತಡೆಯಲು ವ್ಯವಸ್ಥಿತ ಸಂಚು: ಶಾಸಕ ಕೆ.ಎಂ.ಶಿ.

• ಪ್ರಜೋದಯ ವರದಿ

**ಅರಸೀಕೆರೆ:** ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳನ್ನು ತಡೆಯುವ ನಿಟ್ಟಿನಲ್ಲಿ ವ್ಯವಸ್ಥಿತ ಸಂಚು ನಡೆಯುತ್ತಿದೆ ಎಂದು ರಾಜ್ಯ ಗೃಹ ನಿರ್ಮಾಣ ಮಂಡಳಿಯ ಅಧ್ಯಕ್ಷರು ಆದ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಆಕ್ರೋಶ ವ್ಯಕ್ತಪಡಿಸಿದರು.

30 ಕೋಟಿ ವೆಚ್ಚದಲ್ಲಿ ನಗರದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ರಾಜ್ಯ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದ ಕಾಮಗಾರಿಗೆ ಸೋಮವಾರ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ನನ್ನ ವಿರುದ್ಧ ಮಾಡುವ ನಿರಾದರ ಆರೋಪಗಳಿಗಾಗಲಿ ಟೀಕೆ ಟಿಪ್ಪಣಿ ಮಾಡುವ ಮೂಲಕ ನನ್ನನ್ನು ತಡೆಯಬಹುದು ಎಂದುಕೊಂಡಿದ್ದರೆ ಆ ಭ್ರಮೆ ಬೇಡ ಕ್ಷೇತ್ರದ ಜನತೆ ನನ್ನೊಂದಿಗೆ ಇರುವ ತನಕ ಕ್ಷೇತ್ರದ ಅಭಿವೃದ್ಧಿಯನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ ಎಂದು ತಮ್ಮ ರಾಜಕೀಯ ವಿರೋಧಿಗಳಿಗೆ ಟಾಂಗ್ ನೀಡಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದು ಏಳು ದಶಕಗಳು ಕಳೆದಿದ್ದರು ಕ್ಷೇತ್ರದ ಜನತೆ ಶುದ್ಧ ಕುಡಿಯುವ ನೀರು ಸಿಗದೇ ಪರದಾಡುತ್ತಿದ್ದರು ಜಿಲ್ಲೆಯನು ಮಾಡಿದ ಮಹಾ ನಾಯಕರುಗಳು ಸಹ ಅರಸೀಕೆರೆಗೆ ನದಿ ಮೂಲದಿಂದ ನೀರು ಕೊಡಲು ಸಾಧ್ಯವೇ ಇಲ್ಲ ಎಂದು ಹೇಳುತ್ತಿದ್ದರು ಕ್ಷೇತ್ರದ ಜನತೆಯ ಆಶೀರ್ವಾದದ ಬಲದಿಂದ ನಾನು ನಡೆಸಿದ ಹೋರಾಟ ಇಂದು ನಗರದ ಜೊತೆ ಮಾತ್ರವಲ್ಲ ಗ್ರಾಮೀಣ ಭಾಗದ ಜನತೆಯು ಸಹ ನದಿ ಮೂಲದ ಶುದ್ಧ ನೀರನ್ನು ಕುಡಿಯುತ್ತಿದ್ದಾರೆ. ಇದು ಶಾಸಕನಾಗಿ ನಾನು ಮಾಡಿರುವ ಸಾಧನೆ ಅಲ್ಲವೇ ಎಂದು ಪ್ರಶ್ನಿಸಿದರು.

ನಾನು ಶಾಸಕರಾದ ಬಳಿಕ ಕ್ಷೇತ್ರದ



ಅಭಿವೃದ್ಧಿಯ ಚಿತ್ರಣವೇ ಬದಲಾಗಿದೆ. ಹತ್ತಾರು ಜನಪರ ಶಾಶ್ವತ ಯೋಜನೆಗಳು ಅರಸಿಕೆರೆಯನ್ನು ಮಾದರಿ ನಗರವನ್ನಾಗಿಸಿದರೆ ಶಿಕ್ಷಣ, ಆರೋಗ್ಯ, ನಗರ ಸೇರಿದಂತೆ ಗ್ರಾಮೀಣ ಭಾಗದಲ್ಲಾಗಿರುವ ರಸ್ತೆಗಳ ಅಭಿವೃದ್ಧಿ ಸಾಧನೆ ಅಲ್ಲವೇ ಎಂದು ನನ್ನನ್ನು ಟೀಕಿಸುವವರು ಅರ್ಥೈಸಿಕೊಂಡು ನಡೆಯಿರಿ ಎಂದು ಕಿವಿಮಾತು ಹೇಳಿದರು.

ನಗರ ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅರುಣ್ ಕುಮಾರ್ ಮಾತನಾಡಿ, ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಹಾಗೂ ತಮ್ಮ ರಾಜಕೀಯ ಏಳಿಗೆಯನ್ನು ಸಹಿಸದೆ ಹತಾಶರಾಗಿರುವವರು ಮಾಡುವ ಟಿಕೆಟ್ ನೀವು ಕಿವಿಗೊಡಬಹುದು ಬೇಡ ಎಂದು ಶಾಸಕರಿಗೆ ಮನವಿ ಮಾಡಿದ ಅವರು, ರೈಲ್ವೆ ನಿಲ್ದಾಣಕ್ಕೆ ಅಂದುಕೊಂಡಂತೆ ಇರುವ ಬಸ್ ನಿಲ್ದಾಣವನ್ನು ಸರ್ಕಾರದಿಂದ 30 ಕೋಟಿ ಅನುದಾನವನ್ನು ತಂದು ಅಭಿವೃದ್ಧಿಪಡಿಸುತ್ತಿರುವ ಹಾಗೂ ಅದೇ ರೀತಿ ಇನ್ನೂ ನೂರಾರು ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿರುವ ಶಾಸಕ ಶಿವಲಿಂಗೇಗೌಡರಿಗೆ ಅವರೇ ಸಾಟಿ ಎಂದು ಪ್ರಶಂಸಿಸಿದರಲ್ಲದೆ, ಕೆಲವರು ಅವರು ಮಾಡುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ಸಹಿಸದೆ ಇಲ್ಲ ಸಲ್ಲದ ಟೀಕೆಗಳನ್ನು ಮಾಡುತ್ತಾ ಅವರ ರಾಜಕೀಯ ಜೀವನಕ್ಕೆ ಕಪ್ಪು ಚುಕ್ಕೆ ತರಲು ಪ್ರಯತ್ನಿಸುತ್ತಿದ್ದಾರೆ ಎಂದು ಅವರು ಆರೋಪಿಸಿದರು.

ನಗರಸಭೆಯ ನಿಕಟ ಪೂರ್ವ ಅಧ್ಯಕ್ಷ ಎಂ.ಸಮಿವುಲ್ಲಾ ಅವರು ಮಾತನಾಡಿ, ಬಸ್ ನಿಲ್ದಾಣದ ಸುತ್ತಮುತ್ತ ಸಣ್ಣಪುಟ್ಟ ವ್ಯಾಪಾರಗಳನ್ನು ಮಾಡಿಕೊಂಡು ಜೀವನ ಸಾಗಿಸುತ್ತಿದ್ದ ವ್ಯಾಪಾರಿಗಳ ಬದುಕು ಬಸ್ ನಿಲ್ದಾಣದ ಅಭಿವೃದ್ಧಿಯಿಂದ ಭದ್ರವಾಗುತ್ತಿದ್ದು ಇವರಿಗೂ ಸಹ ಸೂಕ್ತ ವ್ಯವಸ್ಥೆ ಕಲ್ಪಿಸಿ ಕೊಡುವ ನಿಟ್ಟಿನಲ್ಲಿ ಶಾಸಕರು ಗಮನಹರಿಸಿ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಕೆಪಿಸಿಸಿ ಕಾರ್ಯದರ್ಶಿ ಶಶಿಧರ್, ಬಾಣಾವರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಧರ್ಮಶೇಖರ್, ನಗರಸಭೆ ನಿಕಟ ಪೂರ್ವ ಸದಸ್ಯರಾದ ವೆಂಕಟಮುನಿ, ದರ್ಶನ್, ಕಾಂಗ್ರೆಸ್ ಮುಖಂಡರಾದ ಸುಬ್ರಹ್ಮಣ್ಯಬಾಬು, ಕೃಷ್ಣ, ತಾ.ಪಂ. ಮಾಜಿ ಅಧ್ಯಕ್ಷೆ ಮಂಜುಳಾಬಾಯ್, ಚಂದ್ರನಾಯ್ಕ್, ದೀಪಂ ಮಾಜಿ ಸದಸ್ಯೆ ಸುಲೋಚನಾಭಾಯಿ, ಗುತ್ತಿಗೆದಾರ ಶಂಕರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಪಾಕ್‌ಗೆ ಎಮಿರೇಟ್ಸ್ ಕ್ರಿಕೆಟ್ ಮಂಡಳಿ ಎಚ್ಚರಿಕೆ

• ಪ್ರಜೋದಯ ವರದಿ

**ಶ್ರೀಲಂಕಾ:** ಫೆ.15 ರಂದು ಕೊಲಂಬೊದಲ್ಲಿ ನಡೆಯಲಿರುವ ಟಿ20 ವಿಶ್ವಕಪ್ 2026ರ ಗುಂಪು ಪಂದ್ಯದಲ್ಲಿ ಭಾರತದ ವಿರುದ್ಧ ಆಡದಿರಲು ನಿರ್ಧರಿಸಿರುವ ಪಾಕಿಸ್ತಾನ ಕ್ರಿಕೆಟ್ ಮಂಡಳಿ (ಪಿಸಿಬಿ) ತನ್ನ ನಿಲುವಿನಿಂದ ಯೂ-ಟರ್ನ್ ತೆಗೆದುಕೊಳ್ಳಲಿದೆ ಎಂದು ಹೇಳಲಾಗಿದೆ.

ಇದೀಗ ಪಿಸಿಬಿ, ಬಾಂಗ್ಲಾದೇಶ ಕ್ರಿಕೆಟ್ ಮಂಡಳಿ (ಬಿಸಿಬಿ) ಮತ್ತು ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಅಧಿಕಾರಿಗಳನ್ನು ಒಳಗೊಂಡಂತೆ ಲಾಹೋರ್‌ನಲ್ಲಿ ನಡೆದ ನಿರ್ಣಾಯಕ ಸಭೆಯ ನಂತರ ಈ ಪಂದ್ಯವು ಮತ್ತೆ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ. ಈ ನಡುವೆ, ಭಾರತದ ಪಂದ್ಯವನ್ನು ಬಹಿಷ್ಕರಿಸುವ' ನಿಲುವಿನ ಕುರಿತು ಎಮಿರೇಟ್ಸ್ ಕ್ರಿಕೆಟ್ ಮಂಡಳಿಯಿಂದ ಇಮೇಲ್ ಬಂದಿದ್ದು, ಪಾಕಿಸ್ತಾನ ಮತ್ತಷ್ಟು ಒತ್ತಡಕ್ಕೆ ಒಳಗಾಗಿದೆ ಎಂದು ತಿಳಿದು ಬಂದಿದೆ.

ಟಿ20 ವಿಶ್ವಕಪ್ ಗ್ರೂಪ್ ಪಂದ್ಯದಲ್ಲಿ ಭಾರತದೊಂದಿಗೆ ಆಡದಿರುವ ನಿರ್ಧಾರವನ್ನು ಮರುಪರಿಶೀಲಿಸುವಂತೆ ಕೋರಿ ಎಮಿರೇಟ್ಸ್ ಮಂಡಳಿಯು ಪಿಸಿಬಿಗೆ ಇಮೇಲ್ ಕಳುಹಿಸಿದೆ ಎಂದು ಎನ್‌ಡಿಟಿವಿ ವರದಿ ಮಾಡಿದೆ. ಟಿ20 ವಿಶ್ವಕಪ್‌ನ ಗ್ರೂಪ್ ಎನಲ್ಲಿನ ಭಾರತ ಮತ್ತು ಪಾಕಿಸ್ತಾನ ನಡುವಿನ ಘರ್ಷಣೆ ನಡೆಯದಿದ್ದರೆ ವ್ಯಾಪಕ ಆರ್ಥಿಕ ಪರಿಣಾಮ ಬೀರುತ್ತದೆ ಎಂದು ಎಮಿರೇಟ್ಸ್ ಮಂಡಳಿಯು ಎಚ್ಚರಿಕೆ ನೀಡಿದೆ.

'ಎಮಿರೇಟ್ಸ್ ಕ್ರಿಕೆಟ್ ಮಂಡಳಿಯು ಪಾಕಿಸ್ತಾನದೊಂದಿಗೆ ದೀರ್ಘ ಕಾಲದ ಬಾಂಧವ್ಯವನ್ನು ಹೊಂದಿದೆ ಮತ್ತು ಹಿಂದೆ ನಾವು ನಮ್ಮ ಸ್ಥಳಗಳನ್ನು ನೀಡುವ ಮೂಲಕ ಮತ್ತು ಅವರ ಕ್ರಿಕೆಟ್ ಅನ್ನು ಆಯೋಜಿಸುವ ಮೂಲಕ ಪಾಕಿಸ್ತಾನಕ್ಕೆ ಅವಕಾಶ ಕಲ್ಪಿಸಿದ್ದೇವೆ' ಎಂದು ಪಿಸಿಬಿಗೆ ಬರೆದ ಪತ್ರದಲ್ಲಿ ತಿಳಿಸಲಾಗಿದೆ.

ಭಾರತದ ವಿರುದ್ಧ 20 ಪಂದ್ಯವನ್ನು ಆಡದಿರುವ ಪಾಕಿಸ್ತಾನದ ಇತ್ತೀಚಿನ ನಿರ್ಧಾರವು ಆಟಕ್ಕೆ ಹಾನಿ ಮಾಡುತ್ತದೆ ಮತ್ತು ಹೆಚ್ಚಿನ ಸದಸ್ಯ ರಾಷ್ಟ್ರಗಳು, ವಿಶೇಷವಾಗಿ ಅಸೋಸಿಯೇಟ್ಸ್ ಆರ್ಥಿಕವಾಗಿ ತೊಂದರೆ ಅನುಭವಿಸುತ್ತದೆ. ನಾವು ತನ್ನ ನಿರ್ಧಾರವನ್ನು ಮರುಪರಿಶೀಲಿಸಿ, ಸ್ವೀಕಾರಾರ್ಹ ಪರಿಹಾರವನ್ನು ಕಂಡುಕೊಳ್ಳುವಂತೆ ವಿನಂತಿಸುತ್ತೇವೆ' ಎಂದು ಪತ್ರದಲ್ಲಿ ಸೇರಿಸಲಾಗಿದೆ.

# ವಕೀಲ ದೇವರಾಜೇಗೌಡ ವಿರುದ್ಧ ಹೈಕಮಾಂಡ್‌ಗೆ ದೂರು

## ಪ್ರೀತಮ್ ಗೌಡ ವಿರುದ್ಧ ಆರೋಪಕ್ಕೆ ಆಕ್ರೋಶ | ದೇವರಾಜೇಗೌಡರಿಂದಲೂ ಪ್ರತ್ಯಾರೋಪ



• ಪ್ರಜೋದಯ ವರದಿ

**ಹಾಸನ:** ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ಪರಾಜಿತಬಿಜೆಪಿ ಅಭ್ಯರ್ಥಿ, ವಕೀಲ ದೇವರಾಜೇಗೌಡ ಮಾಜಿ ಶಾಸಕ ಪ್ರೀತಮ್ ಜೆ.ಗೌಡರ ವಿರುದ್ಧ ಇಲ್ಲ ಸಲ್ಲದ ಆರೋಪ ಮಾಡು ತ್ತಿದ್ದು, ಈ ವರ್ತನೆ ಮುಂದುವರಿಸಿದರೆ ಅವರ ಬಂಡವಾಳ ಬಿಚ್ಚಿಡಬೇಕಾಗುತ್ತದೆಂದು ಬಿಜೆಪಿ ಪದಾಧಿಕಾರಿ ಗಳು ಎಚ್ಚರಿಕೆ ನೀಡಿದ್ದು, ಮತ್ತೊಂ ದೆಡೆ ತಮ್ಮ ವಿರುದ್ಧ ಮಾತನಾ ಡುತ್ತಿರುವ ವರೆಲ್ಲಾ ಪಕ್ಷ ದ್ರೋಹಿಗಳು ಹಾಗು ಶತಮೂರ್ಖರೆಂದು ದೇವರಾಜೇಗೌಡ ಅವರು ತಿರುಗೇಟು ನೀಡಿದ್ದಾರೆ.

ಸೋಮವಾರ ನಗರದಲ್ಲಿ ಹೊಳೆನರಸೀಪುರ ಬಿಜೆಪಿ ಮಂಡಲ ಪದಾ ಧಿಕಾರಿಗಳು ಹಾಗು ದೇವರಾಜೇಗೌಡ ರಿಂದ ಪ್ರತ್ಯೇಕ ಸುದ್ದಿಗೋಷ್ಠಿ ನಡೆ ಸಿದ್ದು, ದೇವರಾಜೇಗೌಡರನ್ನು ಪಕ್ಷ ದಿಂದ ಉಚ್ಚಾಟಿಸುವಂತೆ ಹೈ ಕಮಾಂಡ್‌ಗೆ ಪತ್ರ ಬರೆದಿದ್ದೇವೆಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಂಬಿಹಳ್ಳಿ ಗಿರೀಶ್ ಹೇಳಿದರೆ, ಶತ ಮೂರ್ಖರ ಬಂಡವಾಳವ ನ್ನೆಲ್ಲಾ ವರಿಷ್ಠರ ಗಮನಕ್ಕೆ ಸಾಕ್ಷಿ ಸಮೇತ ತಂದಿದ್ದೇನೆಂದು ದೇವರಾಜೇಗೌಡ ಕಿಡಿಕಾರಿದರು.

ನಂಬಿಹಳ್ಳಿ ಗಿರೀಶ್ ಅವರು ಮಾತನಾಡಿ, ದೇವ ರಾಜೇಗೌಡ ಬಿಜೆಪಿ ಕಾರ್ಯಕರ್ತನೇ ಅಲ್ಲ. 2023ರ ಚುನಾ ವಣೆಯಲ್ಲಿ ಬಿ ಫಾರಂ ಕೊಟ್ಟಿದ್ದು ಬಿಟ್ಟರೆ ಆತನಿಗೂ ಪಕ್ಷಕ್ಕೂ ಸಂಬಂಧವಿಲ್ಲ. ಯಾವ ಸಭೆ, ಪ್ರತಿಭಟನೆಗಳಿಗೆ ಬರುವುದಿಲ್ಲ. ಎಲ್ಲರ ಕುರಿತು ಬಾಯಿಗೆ ಬಂದಂತೆ ಮಾತನಾಡುತ್ತಾ ಮಾನಸಿಕ ಅಸ್ವಸ್ಥರಂತೆ ವರ್ತಿಸುತ್ತಿದ್ದಾನೆ. ಆತ ಒಳ್ಳೆಯ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯದಿದ್ದರೆ ಹುಚ್ಚನಾಗುತ್ತಾನೆ. ಯಾರ್‍ಯಾರ ಬಳಿ ವಸೂಲಿ ಮಾಡಿದ್ದಾನೆಂಬ ಸಂಪೂರ್ಣ ಮಾಹಿತಿ ನಮಗಿದೆ. ಕೊಚ್ಚೆ ಮೇಲೆ ಕಲ್ಲೆಸೆದರೆ ಬಟ್ಟೆ ಕೊಳ ಲಾಗುತ್ತದೆಂದು ಸುಮ್ಮನಿದ್ದೆವು. ಆದರೆ, ದೇವರಾಜೇಗೌಡ ನಮ್ಮ ಮೌನವನ್ನು ಅಸಹಾಯಕತೆ ಎಂದು ತಿಳಿದು ಇದೇ ಧೋರಣೆ ಮುಂದುವರಿ ಸಿದರೆ ಸುಮ್ಮನಿರುವುದಿಲ್ಲವೆಂದು ಏಕವಚನ ದಲ್ಲಿ ವಾಗ್ದಾಳಿ ನಡೆಸಿದರು.

ಹೊಳೆನರಸೀಪುರಮಂಡಲ ಅಧ್ಯಕ್ಷ ಕೆ. ಹೆಚ್.ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿಗಳಾದ ಮೋಹನ್, ಪದ್ಮಪ್ರಸಾದ್, ರೈತ ಮೋರ್ಚಾ ಜಿಲ್ಲಾಧ್ಯಕ್ಷ ನಾರಾಯಣಗೌಡ, ಹೇಮಂತ್‌ಕುಮಾರ್ ಇದ್ದರು.

## ನನ್ನ ಸೋಲಿಗೆ ಈ ಕಳ್ಳರೇ ಕಾರಣ



ರಾಷ್ಟ್ರೀಯ ಪಕ್ಷವಾದ ಬಿಜೆಪಿ ಹೆಸರು ಹೇಳಲು ಯೋಗ್ಯತೆ ಇರಬೇಕು, ನನ್ನ ವಿರುದ್ಧ ಮಾತನಾಡಿರುವವರೆಲ್ಲಾ ದೊಡ್ಡ ಕಳ್ಳರೆಂದು ದೇವರಾಜೇಗೌಡ ಅವರು ಪ್ರತ್ಯುತ್ತರ ನೀಡಿದರು.

ನಂಬಿಹಳ್ಳಿ ಗಿರೀಶ್ ಎಂಬಾತ ರೌಡಿ ಶೀಟರ್, ನಾರಾಯಣಗೌಡ ಎಂಬಾತ ನನ್ನ ದುಡ್ಡಲ್ಲಿ ಎಣ್ಣೆ ಕುಡಿದು ಸೋಲಿಗೆ ಶ್ರಮಿಸಿದ. ಮೋಹನ್‌ಕುಮಾರ್ ಎಂಬಾತ ನನ್ನ ಕಾರಿನಲ್ಲಿ ಓಡಾಡಿ ಮಜಾ ಮಾಡಿದ ಹೊರತು ಮತ ಕೊಡಿಸಲಿಲ್ಲ. ಸ್ವಪಕ್ಷದ ಅಭ್ಯರ್ಥಿ ಸೋಲಿಗೆ ಹೋರಾಡಿದ ಇವರೆಲ್ಲರೂ ಶತಮೂರ್ಖರಲ್ಲದೇ ಮತ್ತೇನೆಂದು ಪ್ರಶ್ನಿಸಿದರು.

ಲೋಕಸಭೆ ಚುನಾವಣೆಯಲ್ಲಿ ಶ್ರೇಯಸ್ ಪಟೇಲ್ ಗೆಲ್ಲಿಸಬೇಕೆಂದು ಬಹಿರಂಗವಾಗಿ ಹೇಳಿದ ಮಾಜಿ ಶಾಸಕ ಪ್ರೀತಮ್‌ಗೌಡ ವಿರುದ್ಧ ಹೈಕಮಾಂಡ್ ಶಿಸ್ತು ಕ್ರಮ ಜರುಗಿಸಲಿಲ್ಲ. ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿದ್ದವರು ಎಲ್ಲಾ ಕಡೆ ಸುತ್ತಾಡಿ ಪಕ್ಷ ಸಂಘಟನೆ ಮಾಡಬೇಕು. ಹವಾ ನಿಯಂತ್ರಿತ ಕಾರಿನಲ್ಲಿ ಓಡಾಡಿದರೆ ಯಾವ ಪ್ರಯೋಜನವಿಲ್ಲ. ಜೆಡಿಎಸ್‌ನ ನಿಖಿಲ್‌ಕುಮಾರ್ ಅವರು ಹೇಗೆ ಪಕ್ಷ ಸಂಘಟನೆ ಮಾಡುತ್ತಿದ್ದಾರೆಂಬುದನ್ನು ನೋಡಿ ಕಲಿಯಿರಿ ಎಂದು ಛೇಡಿಸಿದರು.

ಪ್ರೀತಮ್‌ಗೌಡರ ವಿರುದ್ಧ ಕಾನೂನು ಹೋರಾಟ ಮುಂದುವರಿಸಿದ್ದೇನೆ. ಸ್ವತಃ ಪ್ರಧಾನಿ ನರೇಂದ್ರ ಮೋದಿಯವರೇ ಬಂದು ಸುಮ್ಮನಿರುವಂತೆ ಹೇಳಿದರೂ ಹಿಂದೆ ಸರಿಯುವುದಿಲ್ಲ. ಕಾಂಗ್ರೆಸ್ ಜೊತೆಗೆ ಹೊಂದಾಣಿಕೆ ಮಾಡಿಕೊಂಡು ಜಿಲ್ಲೆಯಲ್ಲಿ ಪಕ್ಷ ಮುಳುಗಿಸಲು ಹೊರಟಿರುವ ಅವರ ಪ್ರಯತ್ನ ಸಫಲವಾಗಲು ಬಿಡುವುದಿಲ್ಲವೆಂದು ಶಪಥ ಮಾಡಿದರು.

### ಹೆಚ್.ಕೆ.ಮಹೇಶ್‌ರಿಂದ ಅಧಿಕಾರ ದುರುಪಯೋಗ

ಒಂದು ಬಾರಿ ಹಾಸನ ನಗರಸಭೆ ಸದಸ್ಯರಾಗಿ ನಗರ ಹೃದಯ ಭಾಗದಲ್ಲಿ ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ ಜಾಗ ಕೊಳ್ಳೆ ಹೊಡೆದಿರುವ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಹೆಚ್.ಕೆ.ಮಹೇಶ್ ಅವರ ಬಂಡವಾಳವನ್ನೂ ಬಯಲಿಗೆಳಯುತ್ತೇನೆಂದು ಹೇಳಿದರು.

ನನ್ನನ್ನು ತೃತೀಯ ದರ್ಜೆ ಪ್ರಜೆ ಎಂದಿರುವ ನೀವು ಯಾವ ದರ್ಜೆಯ ನಾಗರಿಕ ಎಂಬುದನ್ನು ಜನರ ಬಾಯಿಂದಲೇ ಹೇಳಿಸುತ್ತೇನೆ. ನಿಮ್ಮ ಅವ್ಯವಹಾರದ ಎಲ್ಲಾ ದಾಖಲೆಗಳನ್ನು ಬಹಿರಂಗಪಡಿಸುತ್ತೇನೆ. ನಾನು ಕಾಂಗ್ರೆಸ್‌ಗೆ ನಿಮಗಿಂತ ಹಿರಿಯ. ಸೋನಿಯಾ ಗಾಂಧಿ ಹಾಗು ರಾಹುಲ್ ಗಾಂಧಿ ಅವರನ್ನು ವರ್ಷಕ್ಕೆ ಹತ್ತು ಬಾರಿ ಭೇಟಿ ಮಾಡಿದ್ದೇನೆ. ನಿಮ್ಮ ಸಂಪೂರ್ಣ ಜಾತಕ ನನ್ನ ಬಳಿ ಇದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಪ್ರೀತಮ್ ಗೌಡ ವಿರುದ್ಧ ಎ.ಮಂಜು ವಾಗ್ದಾಳಿ

» ಮೊದಲನೇ ಪುಟದಿಂದ

ಸೋತರೆ ರಾಜಕೀಯ ನಿವೃತ್ತಿ ಎಂದವರು ಇನ್ನೂ ರಾಜಕಾರಣದಲ್ಲಿ ಇರುವ ಬಗ್ಗೆ ಯೋಚಿಸಬೇಕೆಂದು ವಾಗ್ದಾಳಿ ನಡೆಸಿದರು.

**ಸರ್ಕಾರದ ವಿರುದ್ಧ ಆಕ್ರೋಶ**

ಇದೇ ಸಂದರ್ಭದಲ್ಲಿ ನಿಗಮ ಮಂಡಳಿ ಅಧ್ಯಕ್ಷರಿಗೆ ಸಚಿವ ದರ್ಜೆ, ವೇತನ ಮತ್ತು ಬಾಡಿಗೆ ಹೆಚ್ಚಳ ವಿಚಾರವಾಗಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಸರ್ಕಾರದಲ್ಲಿ ಅಭಿವೃದ್ಧಿಗೆ ಹಣವಿಲ್ಲ, ರಸ್ತೆ ಗುಂಡಿ ಮುಚ್ಚಲು ಹಣವಿಲ್ಲವೆಂದು ಹೇಳುತ್ತಾರೆ. ಆದರೆ, ಮುಖ್ಯಮಂತ್ರಿಯ ಓಲೈಕೆಗೆ ಸಚಿವ ದರ್ಜೆ, ಹೆಚ್ಚುವರಿ ವೇತನ ನೀಡುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳ ಹೆಸರಲ್ಲಿ ಎಸ್‌ಸಿ–ಎಸ್‌ಟಿ ಹಣ ದುರ್ಬಳಕೆ ಮಾಡಲಾಗಿದೆ ಎಂದು ಆರೋಪಿಸಿದರು.

ಜನರ ತೆರಿಗೆ ಹಣ ಈ ರೀತಿ ಖರ್ಚು ಮಾಡುವುದು ತಪ್ಪು. ಸರ್ಕಾರ ಜನರ ಸರ್ಕಾರವಾಗಬೇಕು, ಅಭಿವೃದ್ಧಿಯ ಸರ್ಕಾರವಾಗಬೇಕು. ಮಂತ್ರಿಗಳಿಗೆ ನೀಡುವ ಸವಲತ್ತುಗಳನ್ನು ಚೇರ್‌ಮನ್‌ಗಳಿಗೂ ನೀಡಿದರೆ ರಾಜ್ಯದ ಹಣಕಾಸಿನ ಸ್ಥಿತಿ ಎಲ್ಲಿಗೆ ಹೋಗುತ್ತದೆ ಎಂಬುದು ಬಜೆಟ್‌ನಲ್ಲಿ ಗೊತ್ತಾಗಲಿದೆ. ಇದರಿಂದ ಜನರ ಮೇಲೆ ಹೆಚ್ಚುವರಿ ಹೊರೆ ಬೀಳುತ್ತದೆ ಎಂದು ಎಚ್ಚರಿಸಿದರು.

# ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ: ಫೆ.12 ರಂದು ಅವಿಶ್ವಾಸ ಮಂಡನೆ

» ಮೊದಲನೇ ಪುಟದಿಂದ

ಗಳನ್ನು ಸಂಗ್ರಹಿಸಿ ಫೆ.16 ರೊಳಗೆ ಕೋರ್ಟ್‌ಗೆ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿದೆ.

ಸಂಸ್ಥೆಯ ಮಾಜಿ ಅಧ್ಯಕ್ಷ ಅಶೋಕ್ ಹಾರನಹಳ್ಳಿ ಬಣದವರನ್ನು ಅಧಿಕಾರದಿಂದ ದೂರವಿಡುವ ಉದ್ದೇಶದಿಂದ ಹಲವು ತಂತ್ರಗಳನ್ನು ಬಳಸಲಾಗಿದೆ ಎಂಬ ಆರೋಪಗಳ ನಡುವೆ, ಹಾಲಿ ಆಡಳಿತದ ನೇತೃತ್ವ ವಹಿಸಿರುವ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಹಾಗು ಕಾರ್ಯದರ್ಶಿ ಚೌಡವಳ್ಳಿ ಜಗ ದೀಶ್ ಅಧಿಕಾರವನ್ನು ಕಾಯ್ದುಕೊಂಡಿದ್ದರು. ಅದನ್ನು ಪ್ರಶ್ನಿಸಿ ಅಶೋಕ್ ಹಾರನಹಳ್ಳಿ ಹಾಗು ಬಿ.ಆರ್.ಗುರುದೇವ್ ಅವರು ನ್ಯಾಯಾಲಯದ ಮೆಟ್ಟಿಲೇರಿದ್ದರು.

**ಬಹುಮತಕ್ಕೆ 13 ಸದಸ್ಯರ ಬಲ ಅಗತ್ಯ**

ಆಡಳಿತ ಮಂಡಳಿಯ ಒಟ್ಟು 24 ಸದಸ್ಯರ ಬಲವಿದ್ದು, ಬೈಲಾ ಪ್ರಕಾರ ಸರಳ ಬಹುಮತ ಪಡೆದ ಬಣವೇ ಸಂಸ್ಥೆಯ ಆಡಳಿತವನ್ನು ಹಿಡಿಯಲು ಅರ್ಹವಾಗಲಿದೆ. ಮೂಲಗಳ ಪ್ರಕಾರ, ಅಶೋಕ್ ಹಾರನಹಳ್ಳಿ–ಬಿ. ಆರ್.ಗುರುದೇವ್ ಬಣಕ್ಕೆ 14 ಸದಸ್ಯರ ಬೆಂಬಲವಿದ್ದು, ಹಾಲಿ ಆಡಳಿತದ ಆರ್.ಟಿ.ದ್ಯಾವೇಗೌಡ–ಚೌಡವಳ್ಳಿ ಜಗದೀಶ್ ಬಣಕ್ಕೆ ಕೇವಲ 10 ನಿರ್ದೇಶಕರ ಬೆಂಬಲ ಇರುವುದಾಗಿ ಹೇಳಲಾಗುತ್ತಿದೆ.

ಸದಸ್ಯರ ಅಮಾನತಿಗೆ ತಡೆಯಾಜ್ಞೆ ಕಳೆದ ಕೆಲ ತಿಂಗಳ ಹಿಂದೆ ಅವಿಶ್ವಾಸ ನಿರ್ಣಯದ ಸಂದರ್ಭದಲ್ಲಿ, ಪ್ರಸ್ತುತ ಆಡಳಿತ ಮಂಡಳಿಯು ಡಾ. ಅರವಿಂದ್, ಶ್ರೀಧರ್ ಹಾಗು ಜಿ. ಆರ್.ಶ್ರೀನಿವಾಸ್ ಮೂವರು ಸದಸ್ಯರನ್ನು ಅಮಾನತು ಮಾಡಿತ್ತು. ಈ ಕ್ರಮವನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಗೆ ನ್ಯಾಯಾಲಯ ತಾತ್ಕಾಲಿಕ ತಡೆಯಾಜ್ಞೆ ನೀಡಿದೆ. ಹೀಗಾಗಿ ಫೆ.12 ರಂದು ನಡೆಯಲಿರುವ ಅವಿಶ್ವಾಸ ನಿರ್ಣಯ ಪ್ರಕ್ರಿಯೆಯಲ್ಲಿ ಯಾವುದೇ ಗೊಂದಲ ಉಂಟಾಗುವುದಿಲ್ಲವೆಂದು ಹೇಳಲಾಗುತ್ತಿದೆ.

**ಅಶೋಕ್ ಹಾರನಹಳ್ಳಿ ಬಣದಲ್ಲಿರುವವರು**

ಅಶೋಕ್ ಹಾರನಹಳ್ಳಿ, ಡಾ|| ಅನೂಪ್ ಹಾರನಹಳ್ಳಿ, ಬಿ.ಆರ್. ಗುರು ದೇವ್, ಅರ್ಜುನ್ ಗುರುದೇವ್, ಕಾರ್ತಿಕ್ ಬಾಪಾಟ್, ಪ್ರಭಾಕರ್, ಡಾ. ಅರವಿಂದ್, ಶಿವಣ್ಣ, ಗುರಪ್ಪ, ಜಿ.ಟಿ.ಕುಮಾರ್, ಜಿ.ಆರ್.ಶ್ರೀನಿವಾಸ್, ಹೆಚ್.ಜಿ. ಶ್ರೀಧರ್, ಸುರೇಶ್, ಬೂವನಹಳ್ಳಿ ಶ್ರೀನಿವಾಸ್.

**ಆರ್.ಟಿ.ದ್ಯಾವೇಗೌಡ' ಬಣದವರು**

ಆರ್.ಟಿ.ದ್ಯಾವೇಗೌಡ', ಚೌಡುವಳ್ಳಿ ಜಗದೀಶ್, ಖಜಾಂಚಿ ಪಾರ್ಶ್ವನಾಥ್, ಜಿ.ಎಲ್. ಮುದ್ದೇಗೌಡ, ನಾಗರಾಜ್ ಜೈನ್, ರಾಜಶೇಖರ್, ಶಂಕರ್, ಬಿ.ಕೆ. ಸುರೇಶ್, ಹೇಮಂತ್, ಪುಟ್ಟರಾಜು.

# 1.50 ಕೋಟಿ ರೂ. ವೆಚ್ಚದ ಕಾಮಗಾರಿಗೆ ಚಾಲನೆ

• ಪ್ರಜೋದಯ ವರದಿ



**ಹಾಸನ:** ನಗರ ವ್ಯಾಪ್ತಿಯಲ್ಲಿ ಶಾಸಕ ಹೆಚ್.ಪಿ.ಸ್ವರೂಪ್ ಸೋಮವಾರ 1.50 ಕೋಟಿ ರೂ. ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಪೆನ್ಷನ್ ಮೊಹಲ್ಲಾ ಬಡಾವಣೆಯಲ್ಲಿ ಅಪಾಯಕಾರಿ ಸ್ಥಳಗಳಲ್ಲಿರುವ ಹಳೆ ವಿದ್ಯುತ್ ತಂತಿಗಳು ಹಾಗು ಕಂಬಗಳನ್ನುತೆರವುಗೊಳಿಸಿ ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಎಲ್‌ಟಿಎಬಿ ಕೇಬಲ್ ಹಾಗು ಹೆಚ್.ಟಿ.ಕವರ್ಡ್ ಕಂಡಕ್ಟರ್ ಅಳವಡಿಕೆ ಕಾರ್ಯ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಶಾಸಕರು, ನಗರದ ವಿವಿಧೆಡೆ ವಿದ್ಯುತ್ ಕಾಮಗಾರಿ ಕೆಲಸ ನಡೆಯುತ್ತಿರುವ ಕಾರಣ ವಿವಿಧೆಡೆ ವಿದ್ಯುತ್ ವ್ಯತ್ಯಯ ಆಗುವ ಸಾಧ್ಯತೆ ಇದೆ ಸಾರ್ವಜನಿಕರು ಹಾಗೂ ಹಾಸನ ಕ್ಷೇತ್ರದ ಜನರು ಸಹಕರಿಸಬೇಕಾಗಿ ಮನವಿ ಮಾಡಿದರು.

ಮೊದಲಿಗೆ 8 ಲಕ್ಷ ರೂ. ವೆಚ್ಚದಲ್ಲಿ ನಗರದ ಪೆನ್ಷನ್ ಮೊಹಲ್ಲಾ ಮುಖ್ಯ ರಸ್ತೆಯಲ್ಲಿರುವ ಶಾಹಿ ಮಸೀದಿಯ ಧರ್ಮಗುರುಗಳ ವಸತಿ ನಿಲಯ ಕಟ್ಟಡ ಕಾಮಗಾರಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಯಿತು. ಬಳಿಕ ನಗರದ ಚೆಂಗಿ ದಿವಾನ್ ದರ್ಗಾದ ಸುತ್ತ 3 ಲಕ್ಷ ರೂ. ವೆಚ್ಚದಲ್ಲಿ ಕಾಂಪೌಂಡ್ ಕಾಮಗಾರಿಗೆ ಚಾಲನೆ, ನಂತರ ಸುಮಾರು 24 ಲಕ್ಷ ರೂ. ವೆಚ್ಚದಲ್ಲಿ ಹಳೆ ಖಬ್ರಸ್ಥಾನ ಹಾಗು ಶವಾಗಾರದ ಸ್ನಾನದ ಗೃಹ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮುಸ್ಲಿಂ ಧರ್ಮ ಗುರುಗಳು ಹಾಗು ಪಕ್ಷದ ಮುಖಂಡರು ಮತ್ತು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಜೊತೆಗಿದ್ದರು. ಎಲ್ಲಾ ಕಾಮಗಾರಿಗಳಲ್ಲೂ ಗುಣಮಟ್ಟ ಕಾಯ್ದುಕೊಂಡು ಸಾರ್ವಜನಿಕರ ಹಿತ ದೃಷ್ಟಿಯಿಂದ ಕೆಲಸ ಮಾಡಬೇಕು ಎಂದು ಗುತ್ತಿಗೆದಾರರು ಹಾಗೂ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಗ್ಯಾರಂಟಿಗಳ ಹಾವಳಿಯಿಂದ ಅನುದಾನದ ಅಭಾವ

» ಮೊದಲನೇ ಪುಟದಿಂದ

ಗ್ಯಾರಂಟಿಗಳೆಲ್ಲಾಚುನಾವಣೆಗೆಮಾತ್ರ ಸೀಮಿತ. ಇದರಿಂದ ರಾಜ್ಯದ ಯಾರಿಗೂ ದೀರ್ಘಾವಧಿಯಲ್ಲಿ ಒಳ್ಳೆಯದಾಗುವುದಿಲ್ಲವೆಂದು ಹೇಳಿದರು.

**ಡಿಸಿಸಿ ಬ್ಯಾಂಕ್ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಬಹುತೇಕ ಚುನಾವಣೆಗಳಲ್ಲಿ ನಮ್ಮ ಪಕ್ಷ ಮೇಲುಗೈ ಸಾಧಿಸಿದ್ದು, ಯಾವುದೇ ಒಳ-ಹೊರ ಬೆಂಬಲವಿಲ್ಲದೆ ಜಯ ಸಾಧಿಸಿ ಉತ್ತಮ ಸ್ಥಿತಿಯಲ್ಲಿ ಇದೆ. ಈ ಯಶಸ್ಸನ್ನು ಮುಂದುವರಿಸಿಕೊಂಡು ಹೋಗುತ್ತೇವೆ.**

**– ಸೂರಜ್ ರೇವಣ್ಣ, ವಿಧಾನ ಪರಿಷತ್ ಸದಸ್ಯ**

**ವರಿಷ್ಠರ ತೀರ್ಮಾನವೇ ಅಂತಿಮ**

ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಮೈತ್ರಿ ಕುರಿತು ಅಪಸ್ವರ ಹೊರ ಹಾಕಿರುವ ಮಾಜಿ ಶಾಸಕ ಪ್ರೀತಮ್ ಗೌಡ ಅವರಿಗೆ ತಿರುಗೇಟು ನೀಡಿದ ಅವರು, ಅದರ ಬಗ್ಗೆ ನಮ್ಮ ಪಕ್ಷದ ಹಾಗೂ ಬಿಜೆಪಿ ಪಕ್ಷದ ವರಿಷ್ಠರು ಕುಳಿತು ತೀರ್ಮಾನ ಮಾಡುತ್ತಾರೆ. ನಮ್ಮ ಅಭಿಪ್ರಾಯ ದಲ್ಲಿ ಪಕ್ಷ ಸದೃಢವಾಗಿ ಸಾಗುತ್ತಿದೆ. ಅವರು ಈ ರೀತಿಯ ಹೇಳಿಕೆಗಳನ್ನು ಹೊಸದಾಗಿ ಕೊಡು ತ್ತಿಲ್ಲ. ಹಿಂದೆಯೂ ನೀಡಿದ್ದಾರೆ, ಈಗಲೂ ಕೊಡುತ್ತಿ ದ್ದಾರೆ, ಮುಂದೆಯೂ ಕೊಡುತ್ತಾರೆ. ಅದಕ್ಕೆ ಪ್ರತಿಕ್ರಿಯೆ ನೀಡದಿರುವುದು ಉತ್ತಮ ಎಂದರು.

# ಫೆ. 28ಕ್ಕೆ ರಾಜ್ಯ ಮಟ್ಟದ ಶೈಕ್ಷಣಿಕ ಮಹಾ ಸಮ್ಮೇಳನ

• ಪ್ರಜೋದಯ ವರದಿ




**ಹಾಸನ:** ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆ.28ರ ಶನಿವಾರ ರಾಜ್ಯ ಮಟ್ಟದ ಶೈಕ್ಷಣಿಕ ಮಹಾ ಸಮ್ಮೇಳನ ಹಾಗು ಧನ್ಯತಾ ಸಮಾ ರಂಭ, ಸಂಘದ ಸುವರ್ಣ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಚೈತ್ರಾ ನಾಯಕರಹಳ್ಳಿ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ರಾಜ್ಯ ಸರ್ಕಾರ ಪ್ರಾಥಮಿಕ ಶಾಲಾ ಶಿಕ್ಷಕರ ಹಲವು ಬೇಡಿಕೆಗಳನ್ನು ಈಡೇರಿಸಿರುವ ಹಿನ್ನಲೆ ಧನ್ಯತಾ ಸಮಾರಂಭ ಏರ್ಪಡಿಸಲಾಗಿದೆ. ಜೊತೆಗೆ ಶಿಕ್ಷಕರ ವಿವಿಧ ಸಮಸ್ಯೆ ಪರಿಹಾರಕ್ಕಾಗಿ ಇದೇ ಸಂದರ್ಭದಲ್ಲಿ ಹಕ್ಕೊತ್ತಾಯ ಮಂಡಿಸಲಾಗುವುದು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಿಕ್ಷಣ ಸಚಿವ ಮಧು ಬಂಗಾರಪ್ಪ ಸೇರಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಭಾಗವಹಿಸುವುದರಿಂದ ನಮ್ಮ ಬೇಡಿ ಕೆಗಳನ್ನು ಸಲ್ಲಿಸಲಾಗುವುದೆಂದರು.

ಮುಖ್ಯವಾಗಿ ಪ್ರಾಥಮಿಕ ಶಾಲಾ ಸಹ ಶಿಕ್ಷಕ ಹುದ್ದೆಯಿಂದ ಪ್ರೌಢ ಶಾಲಾ ಸಹ ಶಿಕ್ಷಕ ವೃಂದ ಗ್ರೇಡ್-1 ಹುದ್ದೆಗಳಿಗೆ ಬಡ್ತಿ ನೀಡಬೇಕು, ಪದವಿ ಹೊಂದಿದ ಎಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಆರ್ಥಿಕ ಸೌಲಭ್ಯ ಒದಗಿಸಬೇಕು. 50 ಮಕ್ಕಳಿರುವ ಶಾಲೆಗೆ ಮುಖ್ಯ ಶಿಕ್ಷಕ ಹಾಗು 150ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ಶಾಲೆಗೆ ಹಿರಿಯ ಮುಖ್ಯ ಶಿಕ್ಷಕರ ಹುದ್ದೆ ಮಂಜೂರು ಮಾಡಬೇಕು.ನೂತನ ಪಿಂಚಣಿ ಯೋಜನೆ ರದ್ದುಮಾಡಿ ಹಳೆಯ ಪಿಂಚಣಿ ಜಾರಿಗೊಳಿಸಬೇಕು. ಬಿಎಲ್‌ಒ ಹಾಗು ಇತರ ಎಲ್ಲಾ ಬೋಧಕೇತರ ಕೆಲಸದಿಂದ ಪ್ರಾಥ ಮಿಕ ಶಾಲಾ ಶಿಕ್ಷಕರನ್ನು ಮುಕ್ತಗೊಳಿಸಬೇಕು ಸೇರಿ ನಾನಾ ಬೇಡಿಕೆಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದೆಂದರು.

ಪಠ್ಯ ಬೋಧನೆಗಿಂತ ಶಾಲಾ ಶಿಕ್ಷಕರಿಗೆ ಹೆಚ್ಚಿನ ಕೆಲಸಗಳನ್ನು ನೀಡಲಾಗುತ್ತದೆ. ಮಕ್ಕಳಿಗೆ ಮೊಟ್ಟೆ ವಿತರಣೆ, ಶಾಲಾ ಆಸ್ತಿ ಸಂರಕ್ಷಣೆ, ಪಠ್ಯೇತರ ಚಟುವಟಿಕೆ, ಚುನಾವಣಾ ಕೆಲಸ ಹೀಗೆ ವ್ಯಾಪ್ತಿ ಮೀರಿ ಕೆಲಸ ನೀಡುತ್ತಿ ರುವುದರಿಂದ ಮಕ್ಕಳಿಗೆ ಸರಿಯಾಗಿ ಪಾಠ ಮಾಡಲು ಸಾಧ್ಯವಾಗುತ್ತಿಲ್ಲ. ಸುಖಾ ಸುಮ್ಮನೆ ಸರ್ಕಾರಿ ಶಿಕ್ಷಕರು ಸರಿಯಾಗಿ ಕೆಲಸ ಮಾಡುವುದಿಲ್ಲವೆಂದು ಆರೋಪ ಮಾಡುವ ಬದಲು ಕೆಲಸದ ಹೊರೆ ಕಡಿಮೆ ಮಾಡಿ ಪಠ್ಯ ಬೋಧನೆಗೆ ನಮ್ಮನ್ನು ಸೀಮಿತಗೊಳಿಸ ಬೇಕೆಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾ ಗೌರವಾಧ್ಯಕ್ಷ ಅಣ್ಣಪ್ಪ, ಪ್ರಧಾನ ಕಾರ್ಯದರ್ಶಿ ರವೀಂದ್ರ, ನಿಕಟ ಪೂರ್ವ ಕಾರ್ಯಾಧ್ಯಕ್ಷ ನಾಯಕರ ಹಳ್ಳಿ ಮಂಜೇಗೌಡ ಇದ್ದರು.

# ವಿಶೇಷ ಚೇತನರಿಂದ ಲೇಖನ ಆಹ್ವಾನ

**ಹಾಸನ:** ವಿಕಲಚೇತನರ ಶ್ರೇಯೋಭಿವೃದ್ಧಿ, ಸರ್ಕಾರದ ಯೋಜನೆಗಳ ತಲುಪಿಸುವ ನಿಟ್ಟಿನಲ್ಲಿ ಕಳೆದ ಹಲವು ವರ್ಷಗಳಿಂದ ಗುರುತರ ಜವಾಬ್ದಾರಿ ನಿರ್ವಹಿಸಿಕೊಂಡು ಬಂದಿರುವ ಅನನ್ಯ ಟ್ರಸ್ಟ್ ವಿಶೇಷ ಚೇತನರಿಗಾಗಿ ವಿಶೇಷ ಸಂಚಿಕೆ ಹೊರತರುತ್ತಿದ್ದು, ಆಸಕ್ತ ವಿಕಲಚೇತನ ರಿಂದ ಲೇಖನಗಳನ್ನು ಆಹ್ವಾನಿಸಿದೆ.

ತಮ್ಮ ಜೀವನ, ಸಾಧನೆ, ನಿತ್ಯ ಜೀವನದಲ್ಲಿ ಎದುರಿಸುವ ಸವಾಲುಗಳ ವಿಷಯವನ್ನು ಕೇಂದ್ರಿಕರಿಸಿ ಕನಿಷ್ಟ 800 ರಿಂದ 1 ಸಾವಿರ ಪದಗಳ ಮಿತಿಯಲ್ಲಿ ನುಡಿ ಅಥವಾ ಯೂನಿಕೋಡ್ ಫಾಂಟ್‌ನಲ್ಲಿ ಬರಹ ಇರಬೇಕು. ಲೇಖಕರು ತಮ್ಮ ಸಂಪೂರ್ಣ ಹೆಸರು, ವಿಳಾಸ ಹಾಗು ಭಾವಚಿತ್ರವನ್ನು ಲಗತ್ತಿಸಬೇಕು. ಲೇಖನ ಕಳುಹಿಸಲು ಕೊನೆಯ ದಿನಾಂಕ 25-02-2026. ಇಮೇಲ್ ವಿಳಾಸ: l ll rs r– l l g-am , ಮಾಹಿತಿಗೆ ಮೊ.ನಂ. 9632065044, 9964095071 ಇಲ್ಲಿಗೆ ಸಂಪರ್ಕಿಸಬಹುದು.

# ಲೋಕಾಯುಕ್ತ ಜನಸಂಪರ್ಕ ಸಭೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಫೆ.11ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1ರ ವರೆಗೆ ತಾಲ್ಲೂಕು ಮಟ್ಟದ ಲೋಕಾಯುಕ್ತ ಜನ ಸಂಪರ್ಕ ಸಭೆ ನಡೆಯಲಿದೆ.

ಹಾಸನ ಲೋಕಾಯುಕ್ತ ವಿಭಾಗದ ಪೊಲೀಸ್ ನಿರೀಕ್ಷಕ ಸಿ.ಎಲ್.ಚಂದ್ರಶೇಖರ್ ಹಾಗು ಅಧಿಕಾರಿಗಳು ಭಾಗವಹಿಸಲಿದ್ದಾರೆ. ಸರ್ಕಾರಿ ಕಚೇರಿಗಳಲ್ಲಿ ಕೆಲಸ ತಡಮಾಡುವ ಅಥವಾ ತೊಂದರೆ ಉಂಟು ಮಾಡುವ ಅಧಿಕಾರಿ ಅಥವಾ ನೌಕರರ ವಿರುದ್ಧ ನಾಗರಿಕರು ದೂರು ಸಲ್ಲಿಸ ಬಹುದು. ಅಂತಹ ದೂರುಗಳನ್ನು ಸಾಮಾನ್ಯ ಕಾರ್ಯ ದಿನಗಳಲ್ಲಿಯೂ ಕಚೇರಿ ಸಮಯದಲ್ಲಿ ಸಲ್ಲಿಸಬಹುದಾಗಿದೆ. ಜೊತೆಗೆ ದೂ: ಮೂಲಕವೂ ಲೋಕಾಯುಕ್ತ ಅಧಿಕಾರಿಗಳನ್ನು ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ನಮೂನೆ-1 ಮತ್ತು ನಮೂನೆ-2 ಬಳಸಬೇಕು ಹಾಗು ಪ್ರಮಾಣ ಪತ್ರ ಜೋಡಿಸ ಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ತಾಲ್ಲೂಕು ಕಚೇರಿ ಸಭಾಂಗಣದ ಸಭೆಯಲ್ಲಿ, ಲೋಕಾಯುಕ್ತ ಕಚೇರಿಯಲ್ಲಿ ಅಥವಾ ನೇರವಾಗಿ ನೋಂದಣಿ ಅಧಿಕಾರಿಗೆ ಕರ್ನಾಟಕ ಲೋಕಾಯುಕ್ತ, ಬಹು ಮಹಡಿ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ಬೀದಿ, ಬೆಂಗಳೂರು 560001 ಈ ವಿಳಾಸಕ್ಕೆ ಕಳುಹಿಸಬೇಕು.

# ನಗರದಲ್ಲಿ ವೇಶ್ಯಾವಾಟಿಕೆ ಜಾಲಪತ್ತೆ

» ಮೊದಲನೇ ಪುಟದಿಂದ

ಇರುವುದನ್ನು ಮನಗಂಡ ಪೊಲೀಸರು ವಿಚಾರಣೆ ನಡೆಸಿದಾಗ ವೇಶ್ಯಾವಾಟಿಕೆ ಜಾಲ ಬೆಳಕಿಗೆ ಬಂದಿದೆ. ಈ ಮಾಹಿತಿ ಆಧರಿಸಿ ಪೊಲೀಸರು ತಕ್ಷಣ ಕಾರ್ಯಾಚರಣೆ ನಡೆಸಿ, ವೇಶ್ಯಾವಾಟಿಕೆ ಜಾಲದ ಕಿಂಗ್‌ಪಿನ್‌ಗಳಾದ ಆಯಿಷ್ ಮತ್ತು ಪ್ರಮೀಳಾ ಅವರನ್ನು ಬಂಧಿಸಿದರು. ಇದೇ ವೇಳೆ ನಾಲ್ವರು ಸಂತ್ರಸ್ತೆಯರನ್ನು ಪೊಲೀಸರು ರಕ್ಷಿಸಿದ್ದಾರೆ. ಬಂಧಿತ ಆಯಿಷ್ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. ಈತ ಈ ಹಿಂದೆಯೂ ವೇಶ್ಯಾವಾಟಿಕೆ ದಂಧೆ ಪ್ರಕರಣದಲ್ಲಿ ಪೊಲೀಸರಿಗೆ ಸಿಕ್ಕಿಬಿದ್ದ ಎಂಬುದು ತನಿಖೆಯಿಂದ ತಿಳಿದು ಬಂದಿದೆ.

# ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ರಕ್ಷಣೆ ನೀಡಲು ನಿಷೇಧಾಜ್ಞೆ ಜಾರಿ

» ಮೊದಲನೇ ಪುಟದಿಂದ

ನೀರು ಹಾಗು ಮಣ್ಣು ಕೃಷಿ ಭೂಮಿಗೆ ಹರಿದು ಸುಮಾರು 20ಎಕರೆಗೂ ಅಧಿಕ ಕಾಫಿ, ಅಡಿಕೆ ಹಾಗು ಇತರ ಬೆಳೆಗಳ ತೋಟಗಳು ಸಂಪೂರ್ಣವಾಗಿ ನಾಶವಾಗಿವೆ. ಅದರಿಂದ ಮುಂದಿನ 30 ರಿಂದ 35 ವರ್ಷಗಳವರೆಗೆ ಕೃಷಿ ಚಟುವಟಿಕೆ ನಡೆಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

ಸಂತ್ರಸ್ತರು ಈ ಬಗ್ಗೆ ಹಲವು ಬಾರಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗು ಜಿಲ್ಲಾಡಳಿತಕ್ಕೆ ಲಿಖಿತ ಮನವಿ ಸಲ್ಲಿಸಿ ದರೂ ಸ್ಪಂದಿಸಿಲ್ಲ. ಮೂಲ ಡಿಪಿಆರ್ (ವಿಸ್ತೃತ ಯೋಜನಾ ವರದಿ) ಪ್ರಕಾರ ಕಾಮಗಾರಿ ನಡೆಸದೇ ಸ್ವರೂಪಬದಲಾಯಿಸಿ ಬಲವಂತವಾಗಿ ಕಾಮಗಾರಿ ಮುಂ ದುವರಿಸಲಾಗುತ್ತಿದೆಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ಹಾನಿಗೊಳಗಾದ ಭೂಮಿ ಹಾಗು ಬೆಳೆಗಳಿಗೆ ವೈಜ್ಞಾನಿಕ ವಾಗಿ ಮೌಲ್ಯಮಾಪನ ಮಾಡಿ ಪರಿಹಾರ ನಿಗದಿಪಡಿಸಬೇಕು. ಅಲ್ಲಿಯವರೆಗೂ ಕಾಮಗಾರಿ ಸ್ಥಗಿತಗೊಳಿಸಬೇಕೆಂದು ಒತ್ತಾಯಿಸಿದರು. ಸಂತ್ರಸ್ತೆ ಪ್ರಿಯಾಂಕ ಅವರು ಮಾತನಾಡಿ, ನಾಲ್ಕು ದಶಕಗಳಿಂದ ಬೆಳೆಸಿಕೊಂಡು ಬಂದ ಕಾಫಿ ತೋಟ ಗಳು ಸಂಪೂರ್ಣ ಹಾಳಾಗಿವೆ. ಹಲವು ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದ್ದರೂ ಪ್ರಯೋಜನ ವಾಗಿಲ್ಲ. ಪ್ರಶ್ನೆ ಮಾಡಿದ ವರ ಮೇಲೆಯೇ ದೂರುದಾಖಲಿಸುವ ಪ್ರಯತ್ನ ನಡೆಯುತ್ತಿದೆಂದು ದೂರಿದರು.

ಪ್ರತಿಭಟನಾ ವಿಷಯ ತಿಳಿದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ ಹಾಗು ಡಿವೈಎಸ್ಪಿ ಮಾಲತೇಶ್ ಭೇಟಿ ನೀಡಿ ಗ್ರಾಮ ಸ್ಥರೊಂದಿಗೆ ಚರ್ಚಿಸಿದರು. ಸಂತ್ರಸ್ತರ ಬೇಡಿಕೆಗಳನ್ನು ಜಿಲ್ಲಾಧಿಕಾರಿ ಗಮನಕ್ಕೆ ತರಲಾಗುವುದು. ಫೆ.12ರಂದು ಜಿಲ್ಲಾಧಿಕಾರಿ ಸಮ್ಮುಖದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಹಾಗು ಸಂತ್ರಸ್ತರೊಂದಿಗೆ ತ್ರಿಪಕ್ಷೀಯ ಸಭೆ ನಡೆಸಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲಾಗುವುದೆಂಬ ಭರವಸೆಯ ಬಳಿಕ ಗ್ರಾಮಸ್ಥರು ಹಾಗು ರೈತರು ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆದರು.

# ಸತತ ಲೋಕಸಭಾ ಕಲಾಪಕ್ಕೆ ಭಂಗ

» ಮೊದಲನೇ ಪುಟದಿಂದ

ಟಿಎಂಸಿಯ ಅಭಿಷೇಕ್ ಬ್ಯಾನರ್ಜಿ, ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್ ಮತ್ತು ಡಿಎಂಕೆಯ ಟಿ.ಆರ್. ಬಾಲು ಅವರೊಂದಿಗೆ ಓಂಬಿರ್ಲಾ ಅವರನ್ನು ಭೇಟಿಯಾದರು. ಈ ವೇಳೆ, ಸದನದ ಬಿಕ್ಕಟ್ಟು ಬಗೆಹರಿಸುವ ಬಗ್ಗೆ ಚರ್ಚೆ ನಡೆಯಿತು.

**ಖರ್ಗೆ ಮಾತನಾಡಲು ಸಿಗದ ಅವಕಾಶ**

ಪ್ರತಿಪಕ್ಷಗಳು ಸೋಮವಾರ ರಾಜ್ಯಸಭೆಯ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾತನಾಡಲು ಅವಕಾಶ ನೀಡದ ವಿಷಯವನ್ನು ಪ್ರಸ್ತಾಪಿಸಿ ಸಭಾತ್ಯಾಗ ಮಾಡಿದರು. ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಕುರಿತು ಮಾತನಾಡಲು ಅವಕಾಶ ನೀಡಲಾಗಿಲ್ಲ ವೆಂದು ಖರ್ಗೆ ಅವರು ಪ್ರಶ್ನೋತ್ತರ ಅವಧಿಯಲ್ಲಿ ಪ್ರಸ್ತಾಪಿಸಲು ಎದ್ದು ನಿಂತರು. ಆದರೆ, ಲೋಕಸಭೆಗೆ ಸಂಬಂಧಿಸಿದ ವಿಷಯವನ್ನು ಇಲ್ಲಿ ಪ್ರಸ್ತಾಪಿಸಲು ಸಭಾಧ್ಯಕ್ಷ ಸಿ.ಪಿ.ರಾಧಾಕೃಷ್ಣನ್ ಅವರು ಖರ್ಗೆ ಅವರಿಗೆ ಅವಕಾಶ ನೀಡಲಿಲ್ಲ ಮತ್ತು ಅವರು ಹೇಳುವ ಯಾವುದೂ ದಾಖಲೆಯಲ್ಲಿ ದಾಖಲಾಗುವುದಿಲ್ಲವೆಂದರು.

ಇದಕ್ಕೂ ಮೊದಲು, ಸಂಸತ್ತು ಅಧಿವೇಶನದಲ್ಲಿದ್ದಾಗ ಸದನದ ಹೊರಗೆ ವಾಣಿಜ್ಯಸಚಿವ ಪಿಯೂಷ್ ಗೋಯಲ್ ಅವರು ಭಾರತ-ಅಮೇರಿಕಾ ವ್ಯಾಪಾರ ಒಪ್ಪಂದದ ಕುರಿತು ಕಳೆದ ವಾರ ಹೇಳಿಕೆ ನೀಡಿದ ವಿಷಯವನ್ನು ಖರ್ಗೆ ಎತ್ತಿದರು. ಸಭಾಧ್ಯಕ್ಷರು ಖರ್ಗೆ ಅವರಿಗೆ ಮಾತನಾಡಲು ಅವಕಾಶ ನೀಡದ ಕಾರಣ, ಇಡೀ ವಿರೋಧ ಪಕ್ಷದ ಸದಸ್ಯರು ಎದ್ದು ನಿಂತು ಪ್ರತಿಭಟನೆ ನಡೆಸಿ, ಸದನದಿಂದ ಹೊರ ನಡೆದರು.

# ಬೀದಿ ರಂಪಾಟ ಮಾಡಿ ಗೌರವ ಕಳೆಯಬೇಡಿ

» ಮೊದಲನೇ ಪುಟದಿಂದ

ರಾಜ್ಯ ಸರ್ಕಾರದ ದುರಾಡಳಿತ, ನಡವಳಿಕೆಗೆ ಜನರು ಬೇಸತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಎಲ್ಲೇ ಹೋದರೂ ಜನರು ಕುಮಾರಣ್ಣನಂತಹ ನಾಯಕ ಈ ರಾಜ್ಯದ ಚುಕ್ಕಾಣಿಯನ್ನು ಹಿಡಿಯಬೇಕೆಂಬ ಪ್ರಸ್ತಾಪಗಳು ಬಹಳ ಗಟ್ಟಿಯಾಗಿ ಕೇಳುತ್ತಿವೆ. ಅದಕ್ಕೆ ನಾನು ಸಾಕ್ಷಿ ಇದ್ದೇನೆಂದು ಹೇಳಿದರು.

ಶಾಸಕ ಜಿ.ಟಿ.ದೇವೇಗೌಡರ ಬಗ್ಗೆ ಕುಮಾರಣ್ಣ ಹೇಳಿಕೆ ಹಾಗು ಚಾಮುಂಡೇಶ್ವರಿ ಕ್ಷೇತ್ರದಿಂದ ಸಾ.ರಾ. ಮಹೇಶ್ ಸ್ಪರ್ಧೆಗೆ ಪ್ರತಿಕ್ರಿಯಿಸಿ, ಅದು ದೇವೇಗೌಡರು ಮತ್ತು ಕುಮಾರಣ್ಣನ ಅಭಿಮಾನಿಗಳು ಇರುವ ಕ್ಷೇತ್ರ. ನಮ್ಮನ್ನು ಪ್ರೀತಿಸುವ ದೊಡ್ಡ ವರ್ಗ ಆ ಕ್ಷೇತ್ರದಲ್ಲಿದ್ದಾರೆಂದರು.

# ಕಾರ್ಮಿಕ ಕಾನೂನು ಅಧಿಸೂಚನೆ ವಾಪಾಸ್‌ಗೆ ಆಗ್ರಹ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ನಾಲ್ಕು ಕಾರ್ಮಿಕ ಕಾನೂನು ರದ್ದುಗೊಳಿಸಿ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಅಧಿಸೂಚನೆ ಹಿಂಪಡೆಯಬೇಕೆಂದು ಆಗ್ರಹಿಸಿ ಫೆ.12 ರಂದು ಪಟ್ಟಣದಲ್ಲಿ ಮೆರವಣಿಗೆ ಮತ್ತು ರಸ್ತೆ ತಡೆ ನಡೆಸ ಲಾಗುವುದೆಂದು ಸಿಐಟಿಯು ಜಿಲ್ಲಾ ಮುಖಂಡ ಹೆಚ್.ಎಸ್. ಮಂಜುನಾಥ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಕೈಗಾರಿಕಾ ಸಂಬಂಧಗಳ (ಕರ್ನಾಟಕ) ಕರಡು ನಿಯಮ ಪ್ರಕಟಿಸುವ ಮೂಲಕ ರಾಜ್ಯ ಸರ್ಕಾರ ಕಾರ್ಮಿಕರಿಗೆ ದ್ರೋಹ ಬಗೆದಿದೆ. ಕಾರ್ಮಿಕ ವಿರೋಧಿಯಾಗಿರುವ ಈ ಕರಡು ನಿಯಮಗಳನ್ನು ಕೂಡಲೇ ಹಿಂಪಡೆಯಬೇಕು. ಕೇಂದ್ರ ಹಾಗು ರಾಜ್ಯ ಸರ್ಕಾರಗಳು ಜಾರಿಗೊಳಿಸಿರುವ ಭೂ ಸುಧಾರಣಾ, ಎಪಿಎಂಸಿ, ಜಾನು ವಾರು ಸಂರಕ್ಷಣಾ ತಿದ್ದುಪಡಿ ಕಾಯ್ದೆ ರದ್ದುಪಡಿಸಬೇಕೆಂದು ಒತ್ತಾಯಿಸಿದರು.

ಕಾರ್ಮಿಕ ಸಂಘಟನೆಗಳ ಜಂಟಿ ವೇದಿಕೆ ಸಂಯುಕ್ತ ಹೋರಾಟ-ಕರ್ನಾಟಕ ಕರೆಯ ಮೇರೆಗೆ ಉತ್ಪಾದನೆ, ಸೇವೆ, ಸ್ಥಗಿತಗೊಳಿಸಿ ಮುಷ್ಕರದಲ್ಲಿ ಅಂಗನವಾಡಿ ನೌಕರರ ಸಂಘ, ಕರ್ನಾಟಕ ಗ್ರಾಮ ಪಂಚಾಯತ್ ನೌಕರರ ಸಂಘ, ಅಕ್ಷರ ದಾಸೋಹ ಸಂಘ, ಕರ್ನಾಟಕ ಪ್ರಾಂತ ರೈತ ಸಂಘ, ರಾಜ್ಯ ರೈತ ಸಂಘ, ದಲಿತ ಸಂಘಟನೆ ಬೀದಿ ಬದಿ ವ್ಯಾಪಾರಿಗಳ ಸಂಘ, ಕನ್ನಡಪರ ಸಂಘಗಳು ಹಾಗು ಪ್ರಗತಿಪರ ಸಂಘಟನೆಗಳು ಪಾಲ್ಗೊಳ್ಳಲಿವೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ಪರಮಾಣು ಶಕ್ತಿಯ ಸುಸ್ಥಿರ ಬಳಕೆ ಮತ್ತು ಪ್ರಗತಿ ಕಾಯ್ದೆ, ವಿಮಾ ಕ್ಷೇತ್ರದಲ್ಲಿ ಶೇ.100 ರಷ್ಟು ವಿದೇಶಿ ನೇರ ಬಂಡವಾಳ ಹೂಡಿಕೆ, ಅಗತ್ಯ ವಸ್ತುಗಳ ಬೆಲೆ ಏರಿಕೆ, ವಿದ್ಯುತ್ ತಿದ್ದುಪಡಿ ಕಾಯ್ದೆ, ಬೀಜ ಮಸೂದೆ, ಅರಾವಳಿ ಬೆಟ್ಟಗಳ ನಾಶದಂತಹ ಆದೇಶ ವಿರೋಧಿಸಿ ರಸ್ತೆ ತಡೆ ನಡೆಸಿ ಪ್ರತಿರೋಧ ವ್ಯಕ್ತಪಡಿಸುವುದಾಗಿ ತಿಳಿಸಿದರು.

29 ಕಾರ್ಮಿಕ ಕಾಯ್ದೆಗಳಿಗೆ ತಿಲಾಂಜಲಿ ನೀಡಿ 2 ತಿಂಗಳ ಹಿಂದೆಯೇ ಕೇಂದ್ರ ಸರ್ಕಾರ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ತಂದಿರುವು ದರಿಂದ ಕಾರ್ಮಿಕರ ಬದುಕಿಗೆ ಹೊಡೆತ ಬೀಳಲಿದೆ.ರಾಜ್ಯ ಸರ್ಕಾರವು ಕಾರ್ಮಿಕ ವಿರೋಧಿ ಸಂಹಿತೆಗಳಿಗೆ ನಿಯಮ ರೂಪಿಸಬಾರದು. ಹಲ ವಾರು ವರ್ಷಗಳಿಂದ ನನೆಗುದಿಗೆ ಬಿದ್ದಿರುವ ಕನಿಷ್ಟ ವೇತನ ಪರಿಷ್ಕರಣೆ ಜಾರಿಗೊಳಿಸಬೇಕೆಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ರಘು, ಸಿ.ಆರ್.ನಾಗರತ್ನ, ತೇಜಸ್ ಗೌಡ, ಮಂಜೇಗೌಡ, ಎಂ.ಎಸ್. ಲೋಕೇಶ್, ನಾಗರತ್ನಮ್ಮ, ಜಾವಿದ್ ಪಾಷಾ, ಚಂದ್ರು ಇತರರಿದ್ದರು.

# ಧರ್ಮಸ್ಥಳ ಪಾದಯಾತ್ರಿಕರಿಗೆ ಲಘು ಉಪಹಾರ ವಿತರಣೆ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಮಹಾಶಿವರಾತ್ರಿ ಅಂಗವಾಗಿ ಧರ್ಮಸ್ಥಳಕ್ಕೆ ಪಾದಯಾತ್ರೆ ಕೈಗೊಂಡಿರುವ ಜಿಲ್ಲೆ ಹಾಗು ಹೊರ ಜಿಲ್ಲೆಯ ಭಕ್ತರಿಗೆ ಪಟ್ಟಣದಲ್ಲಿ ಸೋಮವಾರ ಶಾಸಕ ಸಿ.ಎನ್. ಬಾಲಕೃಷ್ಣ ಅವರು ಬಾಳೆ ಹಣ್ಣು, ನೀರು ಹಾಗು ತಂಪು ಪಾನೀಯ ವಿತರಿಸುವ ಮೂಲಕ ಪಾದಯಾತ್ರೆಗೆ ಶುಭ ಹಾರೈಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಅಡಚಣೆ ಇಲ್ಲದೆ ಪಾದಯಾತ್ರಿಗಳು ಯಶಸ್ವಿಯಾಗಿ ಧರ್ಮಸ್ಥಳ ತಲುಪಲಿ ಎಂಬ ಪ್ರಾರ್ಥನೆಯೊಂದಿಗೆ ಕೆಂಪೇಗೌಡ ಬಳಗ ದಿಂದಆಹಾರಪದಾರ್ಥ ವಿತರಿಸಲಾಗಿದೆಯೆಂದರು.

ಧರ್ಮಸ್ಥಳಕ್ಕೆ ಸಾವಿರಾರು ವರ್ಷಗಳ ಪರಂಪರೆಯಿದೆ. ವರ್ಷದಿಂದ ವರ್ಷಕ್ಕೆ ಕ್ಷೇತ್ರಕ್ಕೆ ತೆರಳುವ ಭಕ್ತರ ಸಂಖ್ಯೆ ಏರಿಕೆಯಾಗುತ್ತಿದೆ. ಕ್ಷೇತ್ರದ ಮಹಿಮೆ ಹಾಗು ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ನಿರ್ವಹಣೆಯಿಂದಾಗಿ ಹೆಚ್ಚು ಭಕ್ತರು ತೆರಳುತ್ತಾರೆ. ಬೆಂಗಳೂರು, ತುಮಕೂರು, ರಾಮನಗರ, ಕಣ್ಣೂರು, ಮಾಗಡಿ, ನಾಗಮಂಗಲ ಸೇರಿ ವಿವಿಧೆಡೆಯಿಂದ ಕೇಸರಿ ವಸ್ತ್ರ ಧರಿಸಿರುವ ಭಕ್ತರು ಪಟ್ಟಣ ಮಾರ್ಗವಾಗಿ ತಂಡೋಪ ತಂಡವಾಗಿ ಶ್ರೀ ಕ್ಷೇತ್ರ ಧರ್ಮಸ್ಥಳದತ್ತ ಕಾಲ್ನಡಿಗೆಯಲ್ಲಿ ಸಾಗುತ್ತಿರುವ ದೃಶ್ಯ ಕಣ್ಮನ ಸೆಳೆಯುತ್ತಿದೆಯೆಂದರು.

ರಸ್ತೆಯುದ್ದಕ್ಕೂ ಅಲ್ಲಲ್ಲಿ ಸಂಘ-ಸಂಸ್ಥೆಗಳ ಕಾರ್ಯಕರ್ತರು ಹಾಗು ದಾನಿಗಳು ನೆರಳಿನ ವ್ಯವಸ್ಥೆಯೊಂದಿಗೆ ಯಾತ್ರಿಗಳಿಗೆ ಕಾಫಿ, ಟೀ, ತಿಂಡಿ, ಊಟ, ಮಜ್ಜಿಗೆ ಹಾಗು ಕುಡಿಯುವ ನೀರಿನ ವ್ಯವಸ್ಥೆಮಾಡಿದ್ದು ಯಾವುದೇತೊಂದರೆಯಾಗದಂತೆ ಗಮನಹರಿಸಲಾಗುತ್ತಿದೆ ಯೆಂದರು. ಕೆಂಪೇಗೌಡ ಬಳಗದ ಸದಸ್ಯರಾದ ಮಂಜುನಾಥ್, ಶರತ್, ರವಿ, ಲೋಕೇಶ್, ಜಯರಾಮ್ ಇತರರು ಇದ್ದರು.

# ಜಾತಿ ನಿಂದನೆ ಹೆಸರಲ್ಲಿ ಪುರಸಭೆ ಮುಖ್ಯಾಧಿಕಾರಿ ದೌರ್ಜನ್ಯ: ಆರೋಪ

• ಪ್ರಜೋದಯ ವರದಿ



**ಸಕಲೇಶಪುರ:** ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ ಅವರ ಜಾತಿ ನಿಂದನೆ (ಅಟ್ರಾಸಿಟಿ) ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡು ಸುಳ್ಳು ಪ್ರಕರಣ ದಾಖಲಿಸಿದ್ದಾರೆಂದು ಆರೋಪಿಸಿ ತಾಲ್ಲೂಕು ವಕೀಲರ ಸಂಘದಿಂದ ಪ್ರಭಾರ ಉಪವಿಭಾಗಾಧಿಕಾರಿ ಮಂಜುನಾಥ್ ಅವರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.

ಮಹೇಶ್ವರಪ್ಪ ವಿರುದ್ಧ ಕ್ರಮ ಕೈಗೊಳ್ಳಬೇಕು. ಕೂಡಲೇ ಸೇವೆಯಿಂದ ಅಮಾನತು ಅಥವಾ ವರ್ಗಾವಣೆ ಮಾಡಬೇಕೆಂದು ವಕೀಲರ ಸಂಘದ ಅಧ್ಯಕ್ಷ ಯಶವಂತ್ ಅವರು ಆಗ್ರಹಿಸಿದರು.

ನಮ್ಮ ಸಂಘದ ಸದಸ್ಯ ಅಭಿಜ್ಞಾನ್ ಅವರು ಸುಭಾಷ್ ಮೈದಾನದ ಸಮೀಪ ಹೊಂದಿರುವ ಆಸ್ತಿಗೆ ಸಂಬಂಧಿಸಿದಂತೆ ಹೈಕೋರ್ಟ್ ಎರಡು ವರ್ಷಗಳ ಹಿಂದೆಯೇ ಅವರ ಹೆಸರಿಗೆ ಖಾತೆ ಮಾಡಿಕೊಡುವಂತೆ ಪುರಸಭೆಗೆ ಸ್ಪಷ್ಟ ನಿರ್ದೇಶನ ನೀಡಿದ್ದರೂ, ಪುರಸಭಾ ಅಧಿಕಾರಿಗಳು ಉದ್ದೇಶಪೂರ್ವಕವಾಗಿ ನಿರ್ಲಕ್ಷ್ಯ ತೋರಿದ್ದಾರೆಂದು ಆರೋಪಿಸಿದರು.

ಹೈಕೋರ್ಟ್ ಆದೇಶಕ್ಕೂ ಮನ್ನಣೆ ನೀಡದ ಈ ಅಧಿಕಾರಿಗಳ ನಡೆ ನ್ಯಾಯಾಂಗ ವ್ಯವಸ್ಥೆಗೆ ಅವಮಾನವಾಗಿದೆ ಎಂದರು. ಖಾತೆಗಾಗಿ ಅಭಿಜ್ಞಾನ್ ಅವರು ತಮ್ಮ ತಂದೆಯ ಮೂಲಕ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವ ಸ್ಪಂದನೆ ದೊರಕದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಾಂತಿಯುತ ಧರಣಿ ನಡೆಸಬೇಕಾಯಿತು. ಮೂರನೇ ದಿನ ಜಿಲ್ಲಾಧಿಕಾರಿ ಸೂಚನೆಯಂತೆ ಗ್ರಾಮ ಪಂಚಾಯಿತಿಗೆ ಕರೆಸಿಕೊಂಡ ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಈ ರೀತಿ ತೊಂದರೆ ನೀಡಿದರೆ ಅಟ್ರಾಸಿಟಿ ಪ್ರಕರಣದಾಖಲಿಸುತ್ತೇನೆಂದು ಬೆದರಿಕೆ ಹಾಕಿದ್ದಾರೆ ಎಂದು ಯಶವಂತ್ ಗಂಭೀರ ಆರೋಪ ಮಾಡಿದರು.

ಈ ಕುರಿತು ಅಭಿಜ್ಞಾನ್ ಅವರು ಎಸ್ಪಿಗೆ ದೂರು ಸಲ್ಲಿಸಿದ್ದರೂ, ಅದನ್ನು ಸಂಪೂರ್ಣ ನಿರ್ಲಕ್ಷ್ಯ ಮಾಡಲಾಗಿದ್ದು, ಬಳಿಕ ಮಹೇಶ್ವರಪ್ಪ ಅವರು ಹಾಸನ ನಗರ ಪೊಲೀಸ್ ಠಾಣೆಯಲ್ಲಿ ಅಟ್ರಾಸಿಟಿ ಕಾಯ್ದೆ ಹಾಗೂ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದಡಿ ಐಪಿಸಿ 353ರಂತೆ ಪ್ರಕರಣ ದಾಖಲಿಸಿದ್ದಾರೆ. ಇದು ಅಧಿಕಾರ ಹಾಗೂ ಜಾತಿಯನ್ನು ದುರುಪಯೋಗಪಡಿಸಿಕೊಂಡು ಉದ್ದೇಶಪೂರ್ವಕವಾಗಿ ಸುಳ್ಳು ಪ್ರಕರಣ ದಾಖಲಿಸಿದ ಸ್ಪಷ್ಟ ಉದಾಹರಣೆ ಎಂದು ವಕೀಲರ ಸಂಘ ಆರೋಪಿಸಿದೆ.

ವಕೀಲ ವೇಣು ಅವರು ಮಾತನಾಡಿ, ಯಾವುದೇ ಕಾಯ್ದೆಯ ಉದ್ದೇಶ ಶೋಷಿತರ ರಕ್ಷಣೆ ಯಾಗಿರಬೇಕು. ಆದರೆ, ಇಲ್ಲಿ ಜಾತಿಯನ್ನು ಮುಂದಿಟ್ಟುಕೊಂಡು ಅಟ್ರಾಸಿಟಿ ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡು ಸುಳ್ಳು ಪ್ರಕರಣ ದಾಖಲಿಸಲಾಗಿದೆ. ಸಮಾಜದಲ್ಲಿ ಜಾತಿ ವೈಷಮ್ಯವನ್ನು ಉಂಟು ಮಾಡುವ ಅಪಾಯಕಾರಿ ಪ್ರಯತ್ನ ನಡೆಯುತ್ತಿದೆ. ಇಂತಹ ಅಧಿಕಾರಿಗಳು ಸಾರ್ವಜನಿಕ ಸೇವೆಗೆ ಅಯೋಗ್ಯರು. ತಕ್ಷಣ ಮೇಲಾಧಿಕಾರಿಗಳು ಇವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಫೆ. 12ರ ಮುಷ್ಕರಕ್ಕೆ ತೋಟ ಕಾರ್ಮಿಕರ ಬೆಂಬಲ

• ಪ್ರಜೋದಯ ವರದಿ




**ಸಕಲೇಶಪುರ:** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ವಿರೋಧಿಸಿ ಫೆ.12ರಂದು ನಡೆಯಲಿರುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರವನ್ನು ಬೆಂಬಲಿಸಿ ತಾಲ್ಲೂಕಿನ ತೋಟ ಕಾರ್ಮಿಕರು ತೋಟಗಳ ಕೆಲಸ ಸ್ಥಗಿತಗೊಳಿಸಿ ಪಟ್ಟಣದಲ್ಲಿ ಮೆರವಣಿಗೆ ಹಾಗೂ ರಸ್ತೆ ನಡೆಸಲಿದ್ದಾರೆಂದು ಸಿಐಟಿಯು ಕಾರ್ಯದರ್ಶಿ ಸೌಮ್ಯ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಬ್ರಿಟಿಷರ ಕಾಲದಿಂದಲೂ ಹೋರಾಟದ ಮೂಲಕ ಕಾರ್ಮಿಕರು ಪಡೆದ ಹಕ್ಕುಗಳನ್ನು ಕೇಂದ್ರ ಸರ್ಕಾರದ ಹೊಸ ಕಾರ್ಮಿಕ ಸಂಹಿತೆಗಳು ಕಸಿದುಕೊಳ್ಳುತ್ತಿವೆ. ಈ ನಾಲ್ಕು ಕಾರ್ಮಿಕ ಸಂಹಿತೆಗಳು ತೋಟ ಕಾರ್ಮಿಕರ ಪಾಲಿಗೆ ಮರಣ ಶಾಸನಗಳಾಗಿವೆ. ಕಾರ್ಮಿಕ ಸಂಹಿತೆಗಳ ಜಾರಿಯಿಂದ 8 ಗಂಟೆಗಳ ಕೆಲಸದ ಅವಧಿಯನ್ನು 12 ಗಂಟೆಗಳಿಗೆ ಹೆಚ್ಚಿಸುವ ಅವಕಾಶ ದೊರೆಯಲಿದೆ. ಹೈಯರ್ ಅಂಡ್ ಫೈರ್ ನೀತಿಯಿಂದ ಉದ್ಯೋಗ ಭದ್ರತೆ ಸಂಪೂರ್ಣವಾಗಿ ಕಳೆದು ಹೋಗಲಿದ್ದು, ಖಾಯಂ ಉದ್ಯೋಗಗಳೇ ಇಲ್ಲದಂತಾಗುತ್ತವೆ ಎಂದರು.

ಕಾರ್ಮಿಕರು ಸಂಘ ಕಟ್ಟಿಕೊಳ್ಳುವ ಹಾಗು ಮುಷ್ಕರ ನಡೆಸುವ ಹಕ್ಕುಗಳ ಮೇಲೆ ಈ ಕಾನೂನುಗಳು ದಾಳಿ ಮಾಡುತ್ತಿವೆ. ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿರುವ ಈ ಸಂದರ್ಭದಲ್ಲಿ ವೈಜ್ಞಾನಿಕ ಕನಿಷ್ಠ ವೇತನವನ್ನು ಜಾರಿಗೊಳಿಸಲು ರಾಜ್ಯ ಸರ್ಕಾರಕ್ಕೂ ಅವಕಾಶವಿಲ್ಲದಂತಾಗಿದೆ ಎಂದು ಆರೋಪಿಸಿದರು.

ಫೆ.12ರಂದು ನಡೆಯುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಅಕ್ಷರ ದಾಸೋಹ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ರಾಮ ಪಂಚಾಯಿತಿ ಸಂಘಟನೆಗಳವರು ಸಂಪೂರ್ಣ ಬೆಂಬಲ ಘೋಷಿಸಿದ್ದು, ಹೋರಾಟಕ್ಕೆ ವ್ಯಾಪಕ ಬೆಂಬಲ ವ್ಯಕ್ತವಾಗಿದೆ ಎಂದು ತಿಳಿಸಿದರು.

ಅಕ್ಷರ ದಾಸೋಹ ಸಂಘಟನೆಯ ಸಂಘಟನಾ ಕಾರ್ಯದರ್ಶಿ ಎಂ.ಎಂ.ಸುಮಿತ್ರಾ, ಅಂಗನವಾಡಿ ಕಾರ್ಯಕರ್ತೆಯರ ಸಂಘದ ಕಾರ್ಯದರ್ಶಿಗಳಾದ ಬಿ.ವಿ.ಪ್ರೀತು, ಎಚ್.ಎಸ್. ಸುಮಿತ್ರಾ, ಉಪಸ್ಥಿತರಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK